MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 241 | ಬುಧವಾರ : 09-07-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 241 | WEDNESDAY : 09-07-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ನೀರಾವರಿ ಯೋಜನೆಗಳ ಬಗ್ಗೆ ಕೇಂದ್ರ ಸಚಿವರೊಂದಿಗೆ ಡಿಸಿಎಂ ಚರ್ಚೆ




**ಬೆಂಗಳೂರು,ಜು.8–** ಕೇಂದ್ರ ಅರಣ್ಯ ಮತ್ತು ಪರಿಸರ ಸಚಿವ ಭೂಪೇಂದ್ರ ಪಾಟೀಲ್‌ರ ಜೊತೆ ಸಭೆಯ ಬಳಿಕ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ದೆಹಲಿಯಲ್ಲಿ ರಾಜ್ಯದ ನೀರಾವರಿ ಯೋಜನೆಗಳ ಬಗ್ಗೆ ಹಿರಿಯ ಅಧಿಕಾರಿಗಳು ಹಾಗೂ ವಕೀಲರೊಂದಿಗೆ ಮಹತ್ವದ ಸಭೆ ನಡೆಸಿದ್ದಾರೆ.

ಕೃಷಿ ಸಚಿವ ಚೆಲುವರಾಯಸ್ವಾಮಿ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಗೌರವ್‌ಗುಪ್ತ ಸೇರಿದಂತೆ ಹಿರಿಯ ಅಧಿಕಾರಿಗಳು, ವಕೀಲರು, ತಂತ್ರಜ್ಞರು ಸಭೆಯಲ್ಲಿ ಉಪಸ್ಥಿತರಿದ್ದರು.

ಮೇಕೆದಾಟು, ಕಳಸಾ ಬಂಡೂರಿ, ಎತ್ತಿನಹೊಳೆ, ಕೃಷ್ಣಾ ಮೇಲ್ದಂಡೆ, ತುಂಗಭದ್ರಾ ಸೇರಿದಂತೆ ಹಲವಾರು ಯೋಜನೆಗಳ ಸ್ಥಿತಿಗತಿ ಹಾಗೂ ಕಾನೂನು ತೊಡಕುಗಳ ಬಗ್ಗೆ ಚರ್ಚೆ ನಡೆಸಲಾಗಿದೆ. ಮೇಕೆದಾಟು ಹಾಗೂ ಕಳಸಾ ಬಂಡೂರಿ ಯೋಜನೆಗಳ ಆರಂಭಕ್ಕೆ ಕೇಂದ್ರ ಪರಿಸರ ಹಾಗೂ ಅರಣ್ಯ ಇಲಾಖೆಯ ಪೂರ್ವಾನುಮತಿ ಅಗತ್ಯವಿದ್ದು, ಕೇಂದ್ರ ಸರ್ಕಾರ ಬಯಸಿದ ಎಲ್ಲಾ ದಾಖಲಾತಿಗಳನ್ನು ಒದಗಿಸಿದ ನಂತರವೂ ಅನುಮತಿ ನೀಡಲು ವಿಳಂಬವಾಗುತ್ತಿರುವ ಬಗ್ಗೆ ಡಿ.ಕೆ.ಶಿವಕುಮಾರ್ ಸಭೆಯಲ್ಲಿ ಅಸಮಾಧಾನ **2ನೇ ಪುಟಕ್ಕೆ**

## ಬೈಪಾಸ್ ರಸ್ತೆ ಕಾಮಗಾರಿ ಬೇಗ ಮುಗಿಸಿಲು ಲಯನ್ಸ್ ಕ್ಲಬ್ ಮನವಿ

**ಯುವ ಮಾರ್ಗ ಸುದ್ದಿ**




**ಲಿಂಗಸುಗೂರು,ಜು.8–** ಪಟ್ಟಣದ ಬೈಪಾಸ್ ರಸ್ತೆಯ ಮೂಲಕ ಕಸಬಾ ಲಿಂಗಸುಗೂರುಗೆ ಹೋಗುವ ಬೈಪಾಸ್ ಮುಖ್ಯ ರಸ್ತೆಯ ಕಾಮಗಾರಿಯನ್ನು ಶೀಘ್ರವಾಗಿ ಮುಗಿಸಬೇಕು ಲಯನ್ಸ್ ಕ್ಲಬ್ ಸದಸ್ಯರು ಸಹಾಯಕ ಆಯುಕ್ತರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಲಿಂಗಸುಗೂರು ದಿಂದ ಕಸಬಾ ಲಿಂಗಸುಗೂರುಗೆ ಹೋಗುವ ಬೆಂಗಳೂರು ಬೈಪಾಸ ಮುಖ್ಯ ರಸ್ತೆಯ ಕಾಮಗಾರಿ ಶುರುವಾಗಿ 3–4 ವರ್ಷಗಳೇ ಕಳೆದಿದೆ ಆದರೆ ಕಾಮಗಾರಿ ಮಾತ್ರ ಇನ್ನೂ ಮುಗಿದ್ದಿಲ್ಲ.ಈ ರಸ್ತೆಯಲ್ಲಿ ತಗ್ಗು ದಿಣ್ಣೆಗಳಿರುವದರಿಂದ ಅವುಗಳಲ್ಲಿ ಮಳೆ ಬಂದಾಗ ನೀರು ತುಂಬಿ ವಾಹನ ಸವಾರರಿಗೆ ಕಾಣಿಸುವುದಿಲ್ಲ. ಇದರಿಂದ ಈಗಾಗಲೇ ಸುಮಾರು 8–10 ಜನ ವಾಹನ ಸವಾರರು ಈ ಗುಂಡಿಗಳಲ್ಲಿ ಬಿದ್ದ ಸಾಕಷ್ಟು ಘಟನೆಗಳು ನಡೆದರೂ ಗುತ್ತಿಗೆದಾರರು ಮಾತ್ರ ಕಾಮಗಾರಿಯನ್ನು ನಿಲ್ಲಿಸಿ ಬೇರೆ ಕಡೆಯ ಕೆಲಸದಲ್ಲಿ ನಿರತರಾಗಿದ್ದಾರೆ. ಅಲ್ಲದೇ ಡಾಂಬರ್ ರಸ್ತೆಯಿಂದ ಕಚ್ಚಾ ರಸ್ತೆಯು ಸುಮಾರು ಅರ್ಧ ಫೀಟ್‌ನಷ್ಟು ಎತ್ತರವಾಗಿರುವುದರಿಂದ ವಾಹನಗಳನ್ನು ಮುಖ್ಯ ರಸ್ತೆಯಿಂದ ಇಳಿಸಲು ತುಂಬಾ ತೊಂದರೆಯಾಗಿರುತ್ತದೆ.ಆದ್ದರಿಂದ ಬೈ ಪಾಸ್ ರಸ್ತೆಯನ್ನು ಶೀಘ್ರದಲ್ಲಿ ಪೂರ್ಣಗೊ ಳಿಸಲು ಸಂಬಂಧಪಟ್ಟ ಇಲಾಖೆಗೆ ತಿಳಿಸಿ ಕ್ರಮ ಕೈಗೊಳ್ಳಿ ತೆಗದುಕೊಳ್ಳಿ ಎಂದರು.ಈ ಸಂದರ್ಭದಲ್ಲಿ ಲಯನ್ಸ್ ಕ್ಲಬ್ ಅಧ್ಯಕ್ಷರಾದ ಶರಣಬಸವ ಮೇಟಿ, ಕಾರ್ಯದರ್ಶಿ ವಿನಯಕುಮಾರ ಗಣಾಚಾರಿ, ಖಜಾಂಚಿ ಅರುಣಕುಮಾರ, ಸದಸ್ಯರಾದ ಸದಸ್ಯರಾದ ನಾಗರಾಜ ಗಸ್ತಿ, ಶರಣಬಸವ ವಾರದ್, ಬಸವರಾಜ ವಕೀಲರು, ಬಸವರಾಜಗೌಡ ಗಣೇಕಲ್ ಸೇರಿ ಇತರರು ಇದ್ದರು.

## ಹಾಸನದಲ್ಲಿ ಹೆಚ್ಚಿದ ಹೃದಯಾಘಾತ ಅಧ್ಯಯನಕ್ಕೆ ಸಮಿತಿ ರಚನೆ

**ಕಲಬುರಗಿ ,ಜು.8–**ಹೃದಯಾಘಾತದಿಂದ ಹಾಸನದಲ್ಲಿ ಹೆಚ್ಚು ಸಾವು ಸಂಭವಿಸುತ್ತಿದ್ದು, ಈ ಬಗ್ಗೆ ತನಿಖೆ ನಡೆಸಲು ಸಮಿತಿ ರಚನೆ ಮಾಡಲಾಗಿದೆ. ಸಮಿತಿಯ ವರದಿ ಬಂದ ಬಳಿಕವೇ ಎಲ್ಲವೂ ಗೊತ್ತಾಗಲಿದೆ ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ ಮತ್ತು ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಹೇಳಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೃದಯಾಘಾತದಿಂದಾಗಿ ಸಾವಿನ ಪ್ರಮಾಣ ಹೆಚ್ಚಾಗುತ್ತಿರುವ ಕುರಿತು ಅನಗತ್ಯ ಗೊಂದಲ ಸೃಷ್ಟಿಸುವುದು ಬೇಡ ಎಂದರಲ್ಲದೆ, ಈ ನಿಟ್ಟಿನಲ್ಲಿ ಸಮಿತಿಯ ವರದಿ ಬಂದ ಬಳಿಕವೇ ತಾವು ಅಧಿಕೃತವಾಗಿ ಮಾತನಾಡುವುದು ಸರಿ ಎನಿಸುತ್ತದೆ ಎಂದರು. **2ನೇ ಪುಟಕ್ಕೆ**




## ಡಿಕೆಶಿ ಸಿಎಂ ಆಗಲಿ: ಸಿಪಿವೈ

**ಬೆಂಗಳೂರು, ಜು. 8–** ನಾನು ಸಚಿವ ಸ್ಥಾನದ ಆಕಾಂಕ್ಷಿ ಅಲ್ಲ. ಉಪಮುಖ್ಯಮಂತ್ರಿಯಾಗಿರುವ ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿಯಾದರೆ ಸಾಕು ಎಂದು ಚನ್ನಪಟ್ಟಣದ ಶಾಸಕ ಸಿ.ಪಿ. ಯೋಗೇಶ್ವರ್ ಹೇಳಿದರು.

ರಾಮನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿ ಆಗಬೇಕು ಎಂಬುದು ನಮ್ಮ ಜಿಲ್ಲೆಯ ಜನ ಹಾಗೂ ಶಾಸಕರ ಅಭಿಪ್ರಾಯ, ಈ ಬಗ್ಗೆ ಹೈಕಮಾಂಡ್ ಮುಂದೆ ಒಂದು ತೀರ್ಮಾನ ತೆಗೆದುಕೊಳ್ಳುವ ವಿಶ್ವಾಸವಿದೆ. ಹೈಕಮಾಂಡ್ ತೀರ್ಮಾನಕ್ಕೆ ನಾನು ಬದ್ಧ ಎಂದರು.

ಅಧಿಕಾರ ಹಂಚಿಕೆಯ ಬಗ್ಗೆ ಹೈಕಮಾಂಡ್ ಮಟ್ಟದಲ್ಲಿ ಯಾವ ರೀತಿ ಮಾತುಗಳಾಗಿವೆ, **2ನೇ ಪುಟಕ್ಕೆ**



## ರಾಯಚೂರು ಜಿಲ್ಲಾಧಿಕಾರಿ ನಿತೀಶ್.ಕೆ ಅವರಿಗೆ ರಾಜ್ಯ ಸರ್ಕಾರದಿಂದ ಪ್ರಶಂಸನಾ ಪತ್ರ

**ಯುವ ಮಾರ್ಗ ಸುದ್ದಿ**

**ರಾಯಚೂರು,ಜು.8–** ವಿವಿಧ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿ ದಕ್ಷ ಆಡಳಿತ ನೀಡುತ್ತಿರುವುದಕ್ಕೆ ರಾಯಚೂರ ಜಿಲ್ಲಾಧಿಕಾರಿಗಳಾದ ನಿತೀಶ್.ಕೆ ಅವರಿಗೆ ರಾಜ್ಯ ಸರ್ಕಾರವು ಪ್ರಶಂಸನಾ ಪತ್ರ ನೀಡಿ ಅಭಿನಂದಿಸಿದೆ.

ರಾಯಚೂರ ಜಿಲ್ಲೆಯಲ್ಲಿ ರಾಷ್ಟ್ರೀಯ ಸಾಮಾಜಿಕ ನೆರವು ಯೋಜನೆಯಲ್ಲಿ ಶೇ.100ರಷ್ಟು ಪ್ರಗತಿ ಸಾಧಿಸಿರುವ ವಿಷಯವನ್ನು ಮಾನ್ಯ ಮುಖ್ಯಮಂತ್ರಿಗಳು ಮೇ ಮಾಹೆಯಲ್ಲಿ ನಡೆಸಿದ ಸಭೆಯಲ್ಲಿ ಗಮನಿಸಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರ ಕಾರ್ಯವೈಖರಿಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ್ದರು. ಸಾಮಾಜಿಕ ನೆರವು ಯೋಜನೆಯ ಪ್ರಗತಿ ಸಾಧನೆಗಾಗಿ ಪ್ರಶಂಸನಾ ಪತ್ರವನ್ನು ಹೊರಡಿಸಲು ಸಹ



ಮುಖ್ಯಮಂತ್ರಿಗಳು ಸೂಚನೆ ನೀಡಿದ್ದರು.

ರಾಯಚೂರ ಜಿಲ್ಲೆಯಲ್ಲಿ ಸಾಮಾಜಿಕ ನೆರವು ಯೋಜನೆಯು ಪ್ರಗತಿ ಸಾಧಿಸಲು ಇಲಾಖಾಧಿಕಾರಿಗಳು ಹಾಗೂ ಇಲಾಖೆಯ ಎಲ್ಲಾ ಸಿಬ್ಬಂದಿ ಅಚಲವಾದ ಬದ್ಧತೆ, ನಿರಂತರ ಶ್ರಮ ಹಾಗೂ ಸಮನ್ವಯದ ಕಾರ್ಯಪದ್ಧತಿಗೆ ಶ್ಲಾಘನೆ ಸಲ್ಲಲೇಬೇಕು. ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರ ತಂಡದ ಈ ಉತ್ಸಾಹ ಹಾಗೂ ಕಠಿಣ ಪರಿಶ್ರಮವೇ ಇಂತಹ ಯಶಸ್ಸಿಗೆ ನಾಂದಿಯಾಗಿದೆ.

ರಾಯಚೂರ ಜಿಲ್ಲೆಯ ಸಮಗ್ರ ಅಭಿವೃದ್ಧಿಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಭವಿಷ್ಯದಲ್ಲಿಯೂ ಇಂತಹುದೇ ಉತ್ಸಾಹದಿಂದ ಕಾರ್ಯನಿರ್ವಹಣೆಯನ್ನು ನಿರೀಕ್ಷಿಸುತ್ತೇವೆ. ಪ್ರಗತಿಪಥದಲ್ಲಿ ರಾಯಚೂರ ಜಿಲ್ಲೆ ಸಾಧನೆ ಇತರೆ ಜಿಲ್ಲೆಗಳಿಗೆ ಪ್ರೇರಣೆಯಾಗಿದೆ ಎಂದು ಜಿಲ್ಲಾಧಿಕಾರಿಗಳ ಕಾರ್ಯದಕ್ಷತೆಗೆ ಮೆಚ್ಚುಗೆ ವ್ಯಕ್ತಪಡಿಸಿರುವ ರಾಜ್ಯ ಸರಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಅವರು, ಈ ವಿಶೇಷ ಸಾಧನೆಗಾಗಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರಿಗೆ ಹಾಗೂ ರಾಯಚೂರ ಜಿಲ್ಲೆಯ ಎಲ್ಲ ಅಧಿಕಾರಿ ಸಿಬ್ಬಂದಿಗೆ ಹೃತ್ಪೂರ್ವಕ ಅಭಿನಂದನೆ ತಿಳಿಸಿದ್ದಾರೆ.

## ಕಂದಾಯ ಇಲಾಖೆ ಸೇವೆಗಳ ಸುಧಾರಣೆಗೆ ಜಯ ಕರ್ನಾಟಕ ರಕ್ಷಣಾ ಸೇನೆಯಿಂದ ಮನವಿ

**ಯುವ ಮಾರ್ಗ ಸುದ್ದಿ**



**ಮಾನ್ವಿ,ಜು.8–**ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ಜಯ ಕರ್ನಾಟಕ ರಕ್ಷಣಾ ಸೇನೆ ತಾಲೂಕು ಘಟಕದ ವತಿಯಿಂದ ತಹಸೀಲ್ದಾರ್ ಭೀಮರಾಯ ರಾಮದುರ್ಗ ಅವರಿಗೆ ಮನವಿ ಸಲ್ಲಿಸಲಾಯಿತು. ಜಯ ಕರ್ನಾಟಕ ರಕ್ಷಣಾ ಸೇನೆಯ ತಾಲೂಕು ಅಧ್ಯಕ್ಷ ರಾಜಾ ವಿಜಯಕುಮಾರ ನಾಯಕ ಅವರು ಮನವಿ ಸಲ್ಲಿಸಿ ಮಾತನಾಡಿ, ಕಂದಾಯ ಇಲಾಖೆಯ ಸೇವೆಗಳನ್ನು ಪಡೆಯುವಲ್ಲಿ ಸಾರ್ವಜನಿಕರು ಎದುರಿಸುತ್ತಿರುವ ಸಮಸ್ಯೆಗಳನ್ನು ವಿವರಿಸಿದರು.

ಮಾನ್ವಿ ಪಟ್ಟಣ ಮತ್ತು ಸುತ್ತಮುತ್ತಲಿನ ಗ್ರಾಮಗಳಿಂದ ಪ್ರತಿದಿನ ನೂರಾರು ಜನರು ವಿವಿಧ ಪ್ರಮಾಣಪತ್ರಗಳು ಮತ್ತು ತಮ್ಮ ಜಮೀನುಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಪಡೆಯಲು ಕಂದಾಯ ಇಲಾಖೆಗೆ ಆಗಮಿಸುತ್ತಾರೆ. ಆದರೆ, ಸಕಾಲ ವಿಭಾಗ ಸೇರಿದಂತೆ ಕಂದಾಯ ಇಲಾಖೆಯ ಎಲ್ಲಾ ಸೇವೆಗಳಿಗೆ ಅರ್ಜಿಗಳನ್ನು ಸ್ವೀಕರಿಸಲು ಕೇವಲ ಒಬ್ಬರೇ ಗಣಕ ನಿಯಂತ್ರಕರು ಇರುವುದರಿಂದ, ಅರ್ಜಿ ಸಲ್ಲಿಸಲು ಮತ್ತು ಆದೇಶ ಪತ್ರಗಳನ್ನು ಪಡೆಯಲು ಹೆಚ್ಚಿನ ಸಮಯ ತೆಗೆದುಕೊಳ್ಳುತ್ತಿದೆ. ಇದರಿಂದ ಸಾರ್ವಜನಿಕರಿಗೆ ತೀವ್ರ ತೊಂದರೆಯಾಗುತ್ತಿದೆ. ರೈತರ ಜಮೀನುಗಳ ಪಹಣಿಗಳನ್ನು ವಿತರಿಸಲು ಪ್ರತ್ಯೇಕ ವ್ಯವಸ್ಥೆ ಮಾಡಿ, ಸಿಬ್ಬಂದಿಯನ್ನು ನೇಮಿಸುವುದರಿಂದ ಶಾಲೆ ಮಕ್ಕಳು, ವೃದ್ಧರು, ಮಹಿಳೆಯರು, ಮತ್ತು ವಿಶೇಷ ಚೇತನ ವ್ಯಕ್ತಿಗಳಿಗೆ ಅನುಕೂಲವಾಗಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಗುರುರಾಜ ಕುಲಕರ್ಣಿ, ಯಂಕೋಬ ಯಾದವ್, ಜಲಾಲ್ ಶಾಸ್ತ್ರಿಕ್ಯಾಂಪ್, ಈರೇಶ ಮಳ್ಳಿ, ಚನ್ನಬಸವ, ಗಂಗಾಧರರಾವ್, ದೊಡ್ಡಪ್ಪ ಹೂಗಾರ, ಮಲ್ಲನಗೌಡ, ರೇಣುಕಾ ರಾಜು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯವನ್ನು ದೊಡ್ಡಮಟ್ಟದಲ್ಲಿ ಬೆಳೆಸುವ ಚಿಂತನೆಯಿದೆ: ಕುಲಪತಿ ಪ್ರೊ.ಶಿವಾನಂದ

**ಯುವ ಮಾರ್ಗ ಸುದ್ದಿ**

**ರಾಯಚೂರು,ಜು.8–** ರಾಯಚೂರ ಜಿಲ್ಲೆಯ ಶೈಕ್ಷಣಿಕ ಸ್ಥಿತಿಗತಿ ಅರಿತು, ಈ ಭಾಗದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಉನ್ನತ ಶಿಕ್ಷಣ ಸಿಗುವಂತಾಗಬೇಕು ಎಂಬ ಆಶಯ ಹೊಂದಿ ರಾಯಚೂರು ಜಿಲ್ಲೆಯಲ್ಲಿರುವ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಸರ್ವಾಂಗೀಣ ಅಭಿವೃದ್ಧಿಯ ಚಿಂತನೆಯೊಂದಿಗೆ ತಾವು ನೂತನ ಕುಲಪತಿಗಳಾಗಿ ಅಧಿಕಾರ ಸ್ವೀಕರಿಸಿದ್ದು, ಈ ವಿಶ್ವವಿದ್ಯಾಲಯವನ್ನು ದೊಡ್ಡಮಟ್ಟದಲ್ಲಿ ಬೆಳೆಸಬೇಕು ಎಂಬ ಮಹತ್ತರವಾದ ಕಾರ್ಯಕ್ಕೆ ತಾವು ಪ್ರತಿಯೊಬ್ಬರ ಸಹಕಾರ ಕೋರುವುದಾಗಿ ರಾಯಚೂರಿನ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ನೂತನ ಕುಲಪತಿಗಳಾದ ಪ್ರೊ.ಶಿವಾನಂದ ಕೆಳಗಿನಮನಿ ಅವರು ಹೇಳಿದರು.

ರಾಯಚೂರ ತಾಲೂಕಿನ ಯರಗೇರಾ ಗ್ರಾಮದಲ್ಲಿರುವ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಶೈಕ್ಷಣಿಕ ಸಮುಚ್ಚಯದ ಸಭಾಂಗಣದಲ್ಲಿ ಜುಲೈ 8ರಂದು ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು.

ರಾಜ್ಯದ ಗಡಿ ಜಿಲ್ಲೆಯಾದ ರಾಯಚೂರ ಜಿಲ್ಲೆಯು ವಿವಿಧ ಭಾಷೆ ಮಾತನಾಡುವ, ವಿಭಿನ್ನ ಸಂಸ್ಕೃತಿ ಆಚರಣೆಯ ಸಮ್ಮಿಲನದ ವಿಶೇಷತೆ ಹೊಂದಿದೆ. ಇಡೀ ರಾಜ್ಯಕ್ಕೆ



ಗಣನೀಯ ಪ್ರಮಾಣದಲ್ಲಿ ವಿದ್ಯುತ್ ಪೂರೈಸಿ ಹೆಸರಾಗಿರುವ ರಾಯಚೂರ ಜಿಲ್ಲೆಗೆ 2020ರಲ್ಲಿ ರಾಜ್ಯ ಸರ್ಕಾರವು ಹೊಸದಾಗಿ ವಿಶ್ವವಿದ್ಯಾಲಯ ಘೋಷಣೆ ಮಾಡುವ ಮೂಲಕ ಈ ಭಾಗಕ್ಕೆ ಸಲ್ಲಬೇಕಾದ ಶೈಕ್ಷಣಿಕೆ ಮಾನ್ಯತೆಯನ್ನು ಕಲ್ಪಿಸಿದ್ದು ರಾಜ್ಯದ ಮತ್ತು ರಾಯಚೂರ ಜಿಲ್ಲೆಯ ಇತಿಹಾಸದಲ್ಲಿ ಸ್ಮರಣೀಯವಾಗಿದೆ ಎಂದು ಅವರು ತಿಳಿಸಿದರು.

ಈ ವಿಶ್ವವಿದ್ಯಾಲಯವು ಹಲವು ಸಾಧನೆ ಮತ್ತು ವಿಶೇಷತೆಗಳನ್ನು ಹೊಂದಿದೆ. ಈ ವಿಶ್ವವಿದ್ಯಾಲಯಕ್ಕೆ ಬರುವ ಹೆಚ್ಚಿನ ಪ್ರಮಾಣದ ವಿದ್ಯಾರ್ಥಿಗಳು ಗ್ರಾಮೀಣ ಹಿನ್ನೆಲೆಯ ಮತ್ತು ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಹಿಂದುಳಿದ ವರ್ಗಕ್ಕೆ ಸೇರಿದವರಿದ್ದು, ಈ ಪ್ರದೇಶದ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ಒದಗಿಸಬೇಕು ಎಂಬುದು ಈ ವಿಶ್ವವಿದ್ಯಾಲಯದ ಗುರಿ ಮತ್ತು ನಮ್ಮ ಆಶಯವಾಗಿದೆ. ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಯ ವಿಷಯ ಮತ್ತು ಸಂವಹನ ಕೌಶಲ್ಯ ಸುಧಾರಿಸಲು ವಿಶ್ವವಿದ್ಯಾಲಯದಲ್ಲಿ ನಿಯಮಿತವಾಗಿ ವಿವಿಧ ವಿಷಯಗಳ ಕುರಿತು ವಿಚಾರ ಸಂಕಿರಣಗಳು, ಕಾರ್ಯಾಗಾರಗಳು ಮತ್ತು ವಿಶೇಷ ಉಪನ್ಯಾಸಗಳನ್ನು ನಡೆಸಲಾಗುತ್ತದೆ ಎಂದು ತಿಳಿಸಿದರು.

ರಾಜ್ಯ ಸರ್ಕಾರವು ಈ ವಿಶ್ವವಿದ್ಯಾಲಯಕ್ಕೆ 31 ಬೋಧಕ ಹುದ್ದೆಗಳನ್ನು ಮಂಜೂರಿ ಮಾಡಿದೆ. ಮೌಲ್ಯಮಾಪನ ವ್ಯವಸ್ಥೆಯಲ್ಲಿ ಪಾರದರ್ಶಕತೆ ಮತ್ತು ಹೊಣೆಗಾರಿಕೆ ತರಲು ಮತ್ತು ವಿಶ್ವವಿದ್ಯಾಲಯದ ಮೇಲಿನ ಆರ್ಥಿಕ ಹೊರೆ ಕಡಿಮೆ ಮಾಡಲು ವಿಶ್ವವಿದ್ಯಾಲಯವು ಡಿಜಿಟಲ್ ಮೌಲ್ಯಮಾಪನ ಪ್ರಾರಂಭಿಸಿದೆ. ಮೂಲಸೌಕರ್ಯ ಮತ್ತು ಪ್ರಯೋಗಾಲಯ ಅಭಿವೃದ್ಧಿಗಾಗಿ ಸರ್ಕಾರವು 15 ಕೋಟಿ ರೂ.ಗಳನ್ನು ಮಂಜೂರಿ ಮಾಡಿದೆ. ವಿಶ್ವವಿದ್ಯಾಲಯ ಆವರಣದಲ್ಲಿರುವ ಮಾನವ ಜೀನೋಮ್ ಕೇಂದ್ರಕ್ಕೆ ಕೆಕೆಆರ್‌ಡಿಬಿ ನಿಧಿಯಡಿಯಲ್ಲಿ ಸರ್ಕಾರವು 47.00 ಕೋಟಿ ರೂ.ಗಳನ್ನು **2ನೇಪುಟಕ್ಕೆ**

## ಮೊದಲನೇಯ ಪುಟದಿಂದ

# ನೀರಾವರಿ ಯೋಜನೆಗಳ ಬಗ್ಗೆ ಕೇಂದ್ರ ಸಚಿವರೊಂದಿಗೆ ಡಿಸಿಎಂ ಚರ್ಚೆ

ವ್ಯಕ್ತಪಡಿಸಿದ್ದಾರೆ. ಈ ಬಗ್ಗೆ ಮತ್ತಷ್ಟು ಚರ್ಚೆಗಳನ್ನು ನಡೆಸಿ ಪೂರ್ವಾನುಮತಿಯನ್ನು ಶೀಘ್ರ ದೊರಕಿಸಿಕೊಡಲು ಅಗತ್ಯ ಕ್ರಮಕೈಗೊಳ್ಳಲು ಅಧಿಕಾರಿಗಳಿಗೆ ಸಲಹೆ ನೀಡಿದ್ದಾರೆ. ಅನಿವಾರ್ಯವಾದರೆ ಕಾನೂನಿನ ಹೋರಾಟಕ್ಕೂ ಮುಂದಾಗುವ ಸೂಚನೆ ನೀಡಲಾಗಿದೆ.

ಎತ್ತಿನಹೊಳೆ ಯೋಜನೆಗಾಗಿ ತುಮಕೂರು ಮತ್ತು ಹಾಸನ ಜಿಲ್ಲೆಯಲ್ಲಿ ಅಡೆತಡೆಗಳು ಎದುರಾಗಿದ್ದು, ಇಲ್ಲಿಯೂ ಕೂಡ ಕೇಂದ್ರ, ಪರಿಸರ ಮತ್ತು ಅರಣ್ಯ ಇಲಾಖೆಯ ಪೂರ್ವಾನುಮತಿ ಅಗತ್ಯವಿದೆ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರಕ್ಕೆ ಈಗಾಗಲೇ ಮನವಿ ಸಲ್ಲಿಸಲಾಗಿದೆ. ದೆಹಲಿಯಲ್ಲಿರುವ ಅಧಿಕಾರಿಗಳು, ಈ ಬಗ್ಗೆ ಅನುಪಾಲನೆ ಮಾಡುವಂತೆ ಸಲಹೆ ನೀಡಿದ್ದಾರೆ.

ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಬಜೆಟ್‌ನಲ್ಲಿ ಘೋಷಿಸಿದಂತೆ 5300 ಕೋಟಿ ರೂ.ಗಳನ್ನು ಶೀಘ್ರ ಮಂಜೂರು ಮಾಡಿಸಲು ಮತ್ತಷ್ಟು ಒತ್ತಡ ಹೆಚ್ಚಿಸುವ ಅಗತ್ಯವಿದೆ. ಕೃಷ್ಣಾ ನ್ಯಾಯಾಧಿಕರಣದ ತೀರ್ಪನ್ನು ಶೀಘ್ರವಾಗಿ ಅಧಿಸೂಚನೆ ಹೊರಡಿಸಬೇಕು. ರಾಜ್ಯಸರ್ಕಾರ ತೀರ್ಪಿನ ಅನುಸಾರ ತನ್ನ ಪಾಲಿನ ನೀರನ್ನು ಬಳಕೆ ಮಾಡಿಕೊಂಡು ಆಲಮಟ್ಟಿ ಅಣೆಕಟ್ಟಿನ ಎತ್ತರ ಸೇರಿದಂತೆ ಇತರ ಯೋಜನೆಗಳನ್ನು ಅನುಷ್ಠಾನಕ್ಕೆ ತರಲು ಸಿದ್ಧವಿದೆ ಎಂದು ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಉಳಿದಂತೆ ಹಲವಾರು ನೀರಾವರಿ ಯೋಜನೆಗಳ ಬಗ್ಗೆಯೂ ಸಭೆಯಲ್ಲಿ ಚರ್ಚಿಸಲಾಗಿದ್ದು, ತುಮಕೂರು ಜಿಲ್ಲೆಗೆ ಹೇಮಾವತಿ ಮೂಲಕ ಸಂಪೂರ್ಣ ನೀರಾವರಿ ಕಲ್ಪಿಸಲು ಕೈಗೊಳ್ಳಬೇಕಾದ ಯೋಜನೆಗಳ ಪ್ರಸ್ತಾವನೆ ಬಗ್ಗೆ ಸಭೆಯಲ್ಲಿ ಸಮಾಲೋಚಿಸಲಾಗಿದೆ. ಬಳಿಕ ನಗರಾಭಿವೃದ್ಧಿ ಇಲಾಖೆಯ ಅಧಿಕಾರಿಗಳ ಜೊತೆ ಬಿಡಿಎ ವಿವಾದಗಳ, ಕಾನೂನು ಸಮರಗಳ ಬಗ್ಗೆ ಡಿ.ಕೆ.ಶಿವಕುಮಾರ್ ಪ್ರಗತಿ ಪರಿಶೀಲನೆ ನಡೆಸಿದರು.

# ಡಿಕೆಶಿ ಸಿಎಂ ಆಗಲಿ: ಸಿಪಿವೈ

ಒಪ್ಪಂದಗಳಾಗಿವೆ ಎಂಬ ಬಗ್ಗೆ ನನಗೆ ಗೊತ್ತಿಲ್ಲ. ನಾನು ಕಾಂಗ್ರೆಸ್ ಪಕ್ಷ ಸೇರಿ ಆರು ತಿಂಗಳಾಗಿವೆ ಎಂದು ಹೇಳಿದರು

ನಾನು ಸಚಿವ ಸ್ಥಾನದ ಆಕಾಂಕ್ಷಿ ಅಲ್ಲ.. ಮಾಗಡಿ ಶಾಸಕ ಹೆಚ್.ಸಿ. ಬಾಲಕೃಷ್ಣ ಆಕಾಂಕ್ಷಿಯಾಗಿದ್ದರೆ ಅವರಿಗೆ ಮೊದಲು ಅವಕಾಶ ಸಿಗಲಿ. ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿಗಳಾಗಬೇಕು ಎಂಬುದು ನಮ್ಮ ಮೊದಲು ಬಯಕೆ ಎಂದು ಹೇಳಿದರು.ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ರಾಷ್ಟ್ರ ರಾಜಕಾರಣಕ್ಕೆ ಹೋಗುತ್ತಾರೆ ಎಂಬೆಲ್ಲ ವಿಚಾರಗಳ ಬಗ್ಗೆ ನನಗೇನೂ ಗೊತ್ತಿಲ್ಲ. ಕಾಂಗ್ರೆಸ್ ನನಗೆ ಹಳೆಯ ಪಕ್ಷವಾದರೂ ಈಗ ಪಕ್ಷಕ್ಕೆ ಬಂದಿದ್ದೇನೆ. ಮುಂದೆ ಪಕ್ಷಗಳ ವಿಚಾರದ ಬಗ್ಗೆ ಗಮನಕೊಡುತ್ತೇನೆ ಎಂದರು.ಕಣ್ವ ನದಿ ಪಾತ್ರದಲ್ಲಿ ಮರು ಗಣಿಗಾರಿಗೆ ಶುರುವಾಗಿದೆ ಎಂಬ ಮಾಹಿತಿ ಇದೆ. ಇದರಿಂದ ನದಿ ಪಾತ್ರದ ಗಾತ್ರ ಹೆಚ್ಚಾಗುತ್ತದೆ. ನಾನು ಮೊದಲಿನಿಂದಲೂ ಅಕ್ರಮ ಮರಳುಗಾರಿಕೆ ವಿರುದ್ಧ ಹೋರಾಟ ನಡೆಸಿದ್ದೇನೆ. ತಾಲ್ಲೂಕು ಆಡಳಿತ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಮರಳು ಗಣಿಗಾರಿಕೆಯನ್ನು ತಡೆಯಬೇಕು ಎಂದರು

# ಹಾಸನದಲ್ಲಿ ಹೆಚ್ಚಿದ ಹೃದಯಾಘಾತ ಅಧ್ಯಯನಕ್ಕೆ ಸಮಿತಿ ರಚನೆ

ಮುಖ್ಯಮಂತ್ರಿ ಬದಲಾವಣೆ ಹಾಗೂ 50–50 ಒಪ್ಪಂದ ಚರ್ಚೆ ಆಗಿರುವುದರ ಕುರಿತು ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಒಪ್ಪಂದದ ಬಗ್ಗೆ ತಮಗೆ ಯಾವುದೇ ಮಾಹಿತಿ ಇಲ್ಲ. ಆ ಬಗ್ಗೆ ತಾವು ಮಾತನಾಡುವುದಿಲ್ಲ ಎಂದು ನುಡಿದರು.

ರಾಜ್ಯದ ಜನತೆಗೆ ಐದು ಗ್ಯಾರಂಟಿಗಳನ್ನು ಕೊಟ್ಟು ಅವುಗಳನ್ನು ಅಕ್ಷರಶಃ ಅನುಷ್ಠಾನಕ್ಕೆ ತರಲಾಗಿದೆ. ಈ ಗ್ಯಾರಂಟಿಗಳ ಬದಲಾವಣೆ ಪ್ರಶ್ನೆಯೇ ಇಲ್ಲ ಎಂದು ಅವರು ಮತ್ತೊಮ್ಮೆ ಸ್ಪಷ್ಟಪಡಿಸಿದರು.

ನಮ್ಮ ಸರ್ಕಾರ ಐದು ವರ್ಷ ಇರುತ್ತದೆ. ಅದರಲ್ಲಿ ಯಾವುದೇ ಅನುಮಾನ ಬೇಡ. ಈ ಐದು ವರ್ಷಗಳವರೆಗೆ ನಾವು ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳು ಇರುತ್ತವೆ ಎಂದು ಒತ್ತಿ ಹೇಳಿದರು.

ರಾಜ್ಯದಲ್ಲಿ ಅಭಿವೃದ್ಧಿ ಕೆಲಸಗಳು ಆಗುತ್ತಿಲ್ಲ. ಶಾಸಕರ ಕ್ಷೇತ್ರಗಳಿಗೆ ಅನುದಾನ ಬರದಿರುವ ಕುರಿತು ಕೇಳಲಾದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಎಲ್ಲರ ಕ್ಷೇತ್ರಗಳಿಗೂ ಅನುದಾನ ಹಂಚಿಕೆ ಆಗುತ್ತಿದೆ. ಕಲ್ಯಾಣ ಕರ್ನಾಟಕ ಭಾಗ ಸೇರಿ ಎಲ್ಲಾ ಕಡೆ ಅಭಿವೃದ್ಧಿ ಕೆಲಸಗಳು ನಡೆಯುತ್ತಲೇ ಇವೆ. ಗ್ಯಾರಂಟಿಗಳನ್ನು ಕೊಟ್ಟಾಗ್ಯೂ ಅಭಿವೃದ್ಧಿ ಕೆಲಸಗಳನ್ನು ಮಾಡಲಾಗುತ್ತಿದೆ ಎಂದರು.

## ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯವನ್ನು ದೊಡ್ಡಮಟ್ಟದಲ್ಲಿ ಬೆಳೆಸುವ ಚಿಂತನೆಯಿದೆ: ಕುಲಪತಿ ಪ್ರೊ.ಶಿವಾನಂದ

(ಮಂಜೂರಿ ಮಾಡಿದೆ. ವಿಶ್ವವಿದ್ಯಾಲಯ ಆವರಣದಲ್ಲಿ ಮೂಲಸೌಕರ್ಯ ಮತ್ತು ಪ್ರಯೋಗಾಲಯ ಅಭಿವೃದ್ಧಿಗಾಗಿ ಕೆಕೆಆರ್‌ಡಿಬಿ ನಿಧಿಯಡಿಯಲ್ಲಿ ಸರ್ಕಾರ 34 ಕೋಟಿ ರೂ.ಗಳನ್ನು ಮಂಜೂರಿ ಮಾಡಿದೆ. ನಮ್ಮ ವಿಶ್ವವಿದ್ಯಾಲಯಕ್ಕೆ ಕೆಲವು ಅವಶ್ಯಕತೆಗಳು ಬೇಕಿದೆ. ಪ್ರಸ್ತುತ ವಿಶ್ವವಿದ್ಯಾನಿಲಯವು ಒಂದೇ ಕಟ್ಟಡದಲ್ಲಿ ಎರಡು ಅವಧಿಗಳಲ್ಲಿ 20 ಸ್ನಾತಕೋತ್ತರ ಕೋರ್ಸ್‌ಗಳನ್ನು ನಡೆಸುತ್ತಿದೆ. ಆದ್ದರಿಂದ, ವಿಶ್ವವಿದ್ಯಾನಿಲಯದ ದಕ್ಷ ಕಾರ್ಯನಿರ್ವಹಣೆಗಾಗಿ ಕನ್ನಡ, ಇಂಗ್ಲಿಷ್ ಮತ್ತು ಉರ್ದು ವಿಭಾಗಗಳಿಗೆ ಕಲಾ ವಿಭಾಗದ ಕಟ್ಟಡ ನಿರ್ಮಾಣವಾಗಬೇಕು. ಇತಿಹಾಸ, ರಾಜ್ಯಶಾಸ್ತ್ರ, ಸಮಾಜಶಾಸ್ತ್ರ, ಅರ್ಥಶಾಸ್ತ್ರ, ಸಮಾಜ ಕಾರ್ಯ, ಪತ್ರಿಕೋದ್ಯಮ ಮತ್ತು ಸಮೂಹ ವಿಭಾಗಗಳಿಗೆ ಸಮಾಜ ವಿಜ್ಞಾನ ವಿಭಾಗದ ಕಟ್ಟಡ ನಿರ್ಮಾಣವಾಗಬೇಕು. ಸಂವಹನ, ಮಹಿಳಾ ಅಧ್ಯಯನ, ಗ್ರಂಥಾಲಯ ಮಾಹಿತಿ ವಿಜ್ಞಾನ, ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತ, ಕಂಪ್ಯೂಟರ್ ವಿಜ್ಞಾನ, ಎಲೆಕ್ಟ್ರಾನಿಕ್ಸ್ ಮತ್ತು ವಾದ್ಯಸಂಗೀತ ಇತ್ಯಾದಿ ವಿಭಾಗಗಳಿಗೆ ಭೌತ ವಿಜ್ಞಾನ ವಿಭಾಗದ ಕಟ್ಟಡ ನಿರ್ಮಾಣವಾಗಬೇಕು.

ಸಸ್ಯಶಾಸ್ತ್ರ, ಪ್ರಾಣಿಶಾಸ್ತ್ರ, ಸೂಕ್ಷ್ಮ ಜೀವವಿಜ್ಞಾನ ವಿಭಾಗಕ್ಕೆ ಜೀವ ವಿಜ್ಞಾನ ವಿಭಾಗ ಕಟ್ಟಡ ನಿರ್ಮಾಣವಾಗಬೇಕು. ಜೊತೆಗೆ ಫ್ಯಾಕಲ್ಟಿ ಆಫ್ ಕಾಮರ್ಸ್ ಕಟ್ಟಡ, ಪರೀಕ್ಷಾ ವಿಭಾಗದ ಕಟ್ಟಡ, ಕ್ಯಾಂಟೀನ್ ಕಟ್ಟಡ, ಅತಿಥಿ ಗೃಹ ಕಟ್ಟಡಗಳು ನಿರ್ಮಾಣವಾಗಬೇಕಿದೆ. ಅಸ್ತಿತ್ವದಲ್ಲಿರುವ ಗ್ರಂಥಾಲಯ ಕಟ್ಟಡದ ವಿಸ್ತರಣೆಯಾಗಬೇಕು. ಇಡೀ ಕ್ಯಾಂಪಸ್‌ಗೆ ಟಾರ್ ರಸ್ತೆಗಳು ನಿರ್ಮಾಣವಾಗಬೇಕು. 400 ಮೀಟರ್ ಹೊಂದಿರುವ ಆಟದ ಮೈದಾನಗಳು ನಿರ್ಮಾಣವಾಗಬೇಕಿದೆ. ಇಡೀ ವಿಶ್ವವಿದ್ಯಾಲಯ ಕ್ಯಾಂಪಸ್‌ಗೆ ಹೈ ಸ್ಪೀಡ್ ಇಂಟರ್ನೆಟ್ ಸಂಪರ್ಕ ಬೇಕಿರುತ್ತದೆ. ಎಲ್ಲಾ ವಿಜ್ಞಾನ ವಿಭಾಗಗಳಿಗೆ ಸಂಶೋಧನಾ ಉಪಕರಣಗಳು ಬೇಕಿರುತ್ತದೆ. ವಿಶ್ವವಿದ್ಯಾಲಯಕ್ಕೆ ಹಂತಹಂತವಾಗಿ ಈ ಎಲ್ಲಾ ಸೌಕರ್ಯ ಕಲ್ಪಿಸಲು ಸರ್ಕಾರಕ್ಕೆ ಪತ್ರ ಬರೆದು ಕ್ರಮವಹಿಸುವುದಾಗಿ ಕುಲಪತಿಗಳಾದ ಪ್ರೊ.ಕೆಳಗಿನಮನಿ ಅವರು ತಿಳಿಸಿದರು.

ಈ ವಿಶ್ವವಿದ್ಯಾಲಯವು ಅಂದಾಜು 250 ಎಕರೆ ಪ್ರದೇಶ ವ್ಯಾಪ್ತಿಯಲ್ಲಿದೆ. 20 ಕೋರ್ಸಗಳನ್ನು ನೀಡಲಾಗುತ್ತದೆ. 20 ಸರ್ಕಾರಿ ಕಾಲೇಜುಗಳು, 6 ಅನುದಾನಿತ ಕಾಲೇಜುಗಳು, 8 ಬಿಎಡ್ ಕಾಲೇಜುಗಳು, 2 ಬಿಪಿಎಡ್ ಮತ್ತು 148 ಖಾಸಗಿ ಕಾಲೇಜುಗಳು ಸೇರಿ ಒಟ್ಟು 184 ಸಂಯೋಜಿತ ಕಾಲೇಜುಗಳು ಈ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಬರುತ್ತವೆ. ಮುಖ್ಯ ಕ್ಯಾಂಪಸ್ಸನಲ್ಲಿ ಒಟ್ಟು 873 ವಿದ್ಯಾರ್ಥಿಗಳ ಬಲವಿದೆ. ಅಂಗ ಸಂಸ್ಥೆಗಳಲ್ಲಿ 4208ರಷ್ಟು ಸ್ನಾತಕೋತ್ತರ ಪದವಿ ಓದುವ ವಿದ್ಯಾರ್ಥಿಗಳಿದ್ದಾರೆ. ಸಂಯೋಜಿತ ವಿಶ್ವವಿದ್ಯಾಲಯಗಳಲ್ಲಿ 56,343 ಯುಜಿ ವಿದ್ಯಾರ್ಥಿಗಳಿದ್ದಾರೆ. ತಲಾವೊಂದು ಆಡಳಿತಾತ್ಮಕ ಕಟ್ಟಡ, ಗ್ರಂಥಾಲಯ ಕಟ್ಟಡ, ಸಿಬ್ಬಂದಿ ಕ್ವಾಟರ್ಸ್, ಅತಿಥಿ ಗೃಹ ಹಾಗೂ ಎಂಜಿನಿಯರಿಂಗ್ ಕಟ್ಟಡಗಳಿವೆ. 5 ಬಾಲಕರ ವಿದ್ಯಾರ್ಥಿ ವಸತಿ ನಿಲಯಗಳು ಹಾಗೂ 2 ಮಹಿಳೆಯರ ವಸತಿ ನಿಲಯಗಳು ಕಾರ್ಯನಿರ್ವಹಿಸುತ್ತಿವೆ.

5 ಖಾಯಂ ಬೋಧಕ ಸಿಬ್ಬಂದಿ, 6 ಖಾಯಂ ಬೋಧಕರ ಸಿಬ್ಬಂದಿ ಇದ್ದಾರೆ. 80 ಅತಿಥಿ ಅಧ್ಯಾಪಕರು, 90 ಜನ ತಾತ್ಕಾಲಿಕ ಸಿಬ್ಬಂದಿ ಇದ್ದಾರೆ. ಈ ವಿಶ್ವವಿದ್ಯಾಲಯದಲ್ಲಿ 187 ವಿದ್ಯಾರ್ಥಿಗಳು, 118 ವಿದ್ಯಾರ್ಥಿನಿಯರು ಹಾಸ್ಟೇಲಗೆ ಪ್ರವೇಶಾತಿ ಪಡೆದುಕೊಂಡಿದ್ದಾರೆ. ಗ್ರಂಥಾಲಯದಲ್ಲಿ ಒಟ್ಟು 25,540 ಪುಸ್ತಕಗಳಿವೆ. 100 ಕಂಪ್ಯೂಟರ್, 8 ಸಂವಾಧಾತ್ಮಕ ಫಲಕಗಳು ಇರುತ್ತವೆ. 5 ಕೊಳವೆಬಾವಿಗಳು ಮತ್ತು 2 ಜನರೇಟರಗಳು ಕಾರ್ಯನಿರ್ವಹಿಸುತ್ತಿವೆ. 1 ಮಿನಿ ಬಸ್ ಇರುತ್ತದೆ ಎಂದು ಅವರು ಕುಲಪತಿಗಳು ಮಾಹಿತಿ ನೀಡಿದರು.

ವಿಶ್ವವಿದ್ಯಾಲಯದಲ್ಲಿ ಕನ್ನಡ, ಇಂಗ್ಲಿಷ್, ಉರ್ದು ಮತ್ತು ಪರ್ಶಿಯನ್, ಇತಿಹಾಸ, ರಾಜ್ಯಶಾಸ್ತ್ರ, ಅರ್ಥಶಾಸ್ತ್ರ, ಸಮಾಜಶಾಸ್ತ್ರ, ಎಂಎಸ್‌ಡಬ್ಲ್ಯು , ಎಂಡಬ್ಲ್ಯು ಎಸ್, ಪತ್ರಿಕೋದ್ಯಮ, ಗ್ರಂಥಾಲಯ ವಿಜ್ಞಾನ, ಗಣಕ ವಿಜ್ಞಾನ, ಗಣಿತಶಾಸ್ತ್ರ, ಫಿಜಿಕ್ಸ್, ಕೆಮಿಸ್ಟ್ರಿ, ಬಾಟನಿ, ಜಿಯಾಲಜಿ, ಮೈಕ್ರೋಬಯಾಲಜಿ, ಇನ್‌ಸ್ಟ್ರೂಮೆಂಟ್ ಟೆಕ್ನಾಲಜಿ ಹಾಗೂ ಎಂಕಾಂ ಸೇರಿದಂತೆ 20 ವಿಷಯಗಳ ಕೋರ್ಸಗಳನ್ನು ಇಲ್ಲಿ ಕಲಿಸಲಾಗುತ್ತದೆ ಎಂದು ಪ್ರೊ.ಕೆಳಗಿನಮನಿ ಅವರು ಮಾಹಿತಿ ನೀಡಿದರು. ಸಲಹೆ, ಮಾರ್ಗದರ್ಶನಬೇಕು: ತಾವು ಈಗಾಗಲೇ ಬೇರೆ ಬೇರೆ ವಿಶ್ವವಿದ್ಯಾಲಯಗಳಲ್ಲಿ ಎರಡೂ ದಶಕಗಳಿಗೂ ಹೆಚ್ಚು ಕಾಲ ಅಧ್ಯಾಪಕರಾಗಿ ಜೊತೆಗೆ ವಿಶ್ವವಿದ್ಯಾಲಯದ ಬೇರೆ ಬೇರೆ ಹುದ್ದೆಗಳಲ್ಲಿ ಉತ್ತಮ ಕಾರ್ಯನಿರ್ವಹಿಸಿದ ಅನುಭವ ಹೊಂದಿದ್ದು, ಇದುವರೆಗೆ 70ಕ್ಕೂ ಹೆಚ್ಚು ಪುಸ್ತಕಗಳನ್ನು ಪ್ರಕಟಿಸಿದ್ದಾಗಿ 33 ಅಭ್ಯರ್ಥಿಗಳಿಗೆ ಪಿಎಚ್‌ಡಿ ಮಾರ್ಗದರ್ಶನ ಮಾಡಿದ್ದಾಗಿ ಪ್ರೊ.ಶಿವಾನಂದ ಕೆಳಗಿನಮನಿ ಅವರು ತಿಳಿಸಿದರು. ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಬೆಳವಣಿಗೆಗೆ ಸಂಬಂಧಿಸಿದಂತೆ ಏನೇ ಸಲಹೆ ಮತ್ತು ಮಾರ್ಗದರ್ಶನವಿದ್ದರೆ ಅದನ್ನು ತಾವು ಸ್ವೀಕರಿಸುವುದಾಗಿ ಪ್ರೊ.ಶಿವಾನಂದ ಕೆಳಗಿನಮನಿ ಅವರು ತಿಳಿಸಿದರು.ಪತ್ರಿಕಾಗೋಷ್ಠಿಯಲ್ಲಿ ಕುಲ ಸಚಿವರಾದ ಡಾ.ಚನ್ನಪ್ಪ ಎ., ಮೌಲ್ಯಮಾಪನ ಕುಲಸಚಿವರಾದ ಡಾ.ಜ್ಯೋತಿಧಾಮ ಪ್ರಕಾಶ, ವಿಶ್ವವಿದ್ಯಾಲಯದ ಆಡಳಿತ ಅಧಿಕಾರಿಗಳು ಆಗಿರುವ ಸಹ ಪ್ರಾಧ್ಯಾಪಕರಾದ ಡಾ.ಕೆ.ವೆಂಕಟೇಶ, ಸಹ ಪ್ರಾಧ್ಯಾಪಕರಾದ ಡಾ.ಸುಯಮೀಂದ್ರ ಕುಲಕರ್ಣಿ, ಕಾಲೇಜು ಅಭಿವೃದ್ಧಿ ಪರಿಷತ್ತಿನ ನಿರ್ದೇಶಕರಾದ ಡಾ.ರಾಘವೇಂದ್ರ ಪತ್ತೇಪೂರ ಸೇರಿದಂತೆ ವಿಶ್ವವಿದ್ಯಾಲಯದ ಇನ್ನಿತರ ಸಹ ಪ್ರಾಧ್ಯಾಪಕರು ಮತ್ತು ಇನ್ನಿತರರು ಇದ್ದರು.

# ಸಮಾಜದ ಪರಿವರ್ತನೆಯಲ್ಲಿ ಪತ್ರಕರ್ತರ ಪಾತ್ರ ಮಹತ್ವದ್ದು: ಶಾಸಕ ಪಾಟೀಲ್



**ಹುಮನಾಬಾದ್:ಜು.8–**ಪತ್ರಿಕೆಯಲ್ಲಿ ಪ್ರಕಟವಾಗುವ ಸುದ್ದಿಯ ಮೇಲೆ ಇಂದಿಗೂ ಜನರ ವಿಶ್ವಾಸ ಇದೆ. ಸುದ್ದಿಗಳ ಕುರಿತು ನಿಜಾಂಶ ತಿಳಿದುಕೊಂಡು ವರದಿಗಳನ್ನು ಮಾಡಿ ಎಂದು ಶಾಸಕ ಡಾ. ಸಿದ್ದು ಪಾಟೀಲ್ ಹೇಳಿದರು.

ಪತ್ರಿಕಾ ದಿನಾಚರಣೆ ಪ್ರಯುಕ್ತ ಪಟ್ಟಣದ ಹೊರವಲಯದಲ್ಲಿರುವ ಶಾಸಕ ಡಾ. ಸಿದ್ದು ಪಾಟೀಲ್ ಅವರ ಖಾಸಗಿ ಗೇಸ್ಟಹೌಸದಲ್ಲಿ ಸೋಮವಾರ ಆಯೋಜಿಸಿದ್ದ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ವರದಿಗಾರರು ಯಾರಾರೂ ಹೇಳುವ ಮಾಹಿತಿ ಆಧರಿಸಿ ನಂಬಿ ವರದಿ ಮಾಡುವ ಮುಂಚೆ ವಿಷಯ ನಿಜವೋ ಸುಳ್ಳೋ ಎಂದು ಪುರಾವೆಗಳನ್ನು ಪರಿಶೀಲಿಸಿ ವರದಿ ಗಳನ್ನು ಮಾಡಿ ಎಂದರು.

ಕರ್ನಾಟಕ ಕಾರ್ಯನಿರ್ತರ ಪತ್ರಕರ್ತ ಸಂಘದ ಅಧ್ಯಕ್ಷ ದುರ್ಯೋಧನ ಹೂಗಾರ ಮಾತನಾಡಿದರು.

ಪತ್ರಕರ್ತರಾದ ಸಂಜೀವಕುಮಾರ ಜುನ್ನಾ, ಶೈಲೇಂದ್ರ ಕಾವಡಿ ,ಸಂಜಯ್ ದಂತಕಾಳೆ, ಗುಂಡು ಅತಿವಾಳ, ವೆಂಕಟೇಶ ಜಾಧವ್, ಶಶಿಕಾಂತ್ , ಪ್ರಶಾಂತ ,ಸೈಯದ್ ರಿಜ್ವಾನ್ , ಸತೀಶ್, ಶಿವಶರಣ ಚಾಂಗಲೇರಿ, ಇದೆ ವೇಳೆ ಪತ್ರಕರ್ತರನ್ನು ಸನ್ಮಾನಿಸಿ ಗೌರವಿಸಿದರು

ಚಿಟಗುಪ್ಪ ಹಾಗೂ ಬಸವಕಲ್ಯಾಣ ತಾಲೂಕ ಮಟ್ಟದ ವರದಿಗಾರರಿಗೆ ಸನ್ಮಾನಿಸಲಾಯಿತು.ಈ ಸಂದರ್ಭದಲ್ಲಿ ಮಾಜಿ ಶಾಸಕ ಸುಭಾಷ ಕಲ್ಲೂರ ಬಿಜೆಪಿ ಮುಖಂಡ ಬಸವರಾಜ ಆರ್ಯ,ಪಿಕೆಪಿಎಸ್ ಅಧ್ಯಕ್ಷ ಸಂತೋಷ ಪಾಟೀಲ್, ಸುನಿಲ್ ಪಾಟೀಲ್, ಅನೀಲ್ ಪಸರ್ಗಿ,ಅಭಿಮನ್ಯು ನಿರಗೂಡೆ, ನಾಗಭೂಷಣ ಸಂಗಮಕರ್, ನಾರಾಯಣ ರಾಂಪೂರೆ, ರೇವಣಪ್ಪ ಹುಗಾರ , ಗೋಪಾಲಕೃಷ್ಣ ಮೋಹಳೆ, ಗಜೇಂದ್ರ ಕನಕಟ್ಟಕರ್, ರವಿ ಹೊಸಳ್ಳಿ, ಪರಮೇಶ್ವರ ಕಾಳಮದರ್ಗಿ, ನಾಗೇಶ್ವರಿ ಕುಂಬಾರ, ಸುರೇಖಾ ನರೂಣೆ, ಸವಿತಾ ಪಾಟೀಲ್, ಅನುರಾಧಾ ಇದ್ದರು.

# ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಪಾಲಿಸಿ ಕನ್ಸಲ್ಟೆಂಟ್ ಹುದ್ದೆ ನೇಮಕಾತಿ ಅರ್ಜಿ ಆಹ್ವಾನ

**ರಾಯಚೂರು,ಜು.8–**ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಗೆ ಅವಶ್ಯವಿರುವ ಪಾಲಿಸಿ ಕನ್ಸಲ್ಟೆಂಟ್ (Policy Consult-ant)– 01 ಹುದ್ದೆಯನ್ನು ಒಳಗುತ್ತಿಗೆ ಆಧಾರದ ಮೇಲೆ ಒಂದು ವರ್ಷದ ಅವಧಿಗೆ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು, ಅಂಗೀಕೃತ ವಿಶ್ವವಿದ್ಯಾಲಯಗಳಿಂದ ಮಾಸ್ಟರ್ ಡಿಗ್ರಿ ಇನ್ ಬಿಸಿನೆಸ್ ಅಡ್ಮಿನಿಸ್ಟ್ರೇಷನ್ (ಎಂಬಿಎ) ಅಥವಾ ಮಾಸ್ಟರ್ ಇನ್ ಪಬ್ಲಿಕ್ ಪಾಲಿಸಿ (ಎಂಪಿಪಿ) ವಿದ್ಯಾರ್ಹತೆ ಹೊಂದಿರಬೇಕು.

ಸಂಶೋಧನೆ ಮತ್ತು ನೀತಿ ವಿಶ್ಲೇಷಣೆಯಲ್ಲಿ ಕನಿಷ್ಠ 2 ವರ್ಷಗಳ ಅನುಭವ, ಸರ್ಕಾರಿ ಸಂಸ್ಥೆಗಳೊಂದಿಗೆ ಸಮನ್ವಯದಲ್ಲಿ ಕೆಲಸದ ಜ್ಞಾನ ಮತ್ತು ಅನುಭವ ಹೊಂದಿರಬೇಕು. ಡೇಟಾ ವಿಶ್ಲೇಷಣಾ ಸಾಫ್ಟ್‌ವೇರ್‌ನ ಜ್ಞಾನವು ಹೊಂದಿರಬೇಕು.

ಜಿಲ್ಲಾಧಿಕಾರಿಗಳು ರಾಯಚೂರ ಇವರಿಂದ ಅಭ್ಯರ್ಥಿಯ ಕಾರ್ಯಕ್ಷಮತೆ ತೃಪ್ತಿಕರವಾಗಿ ಪೂರೈಸಿದ್ದಾರೆಂದು ಘೋಷಿಸಿದಲ್ಲಿ ಮಾತ್ರ ಮುಂದಿನ ವರ್ಷಕ್ಕೆ ಅಭ್ಯರ್ಥಿಯನ್ನು ಮುಂದುವರೆಸಲಾಗುವುದು. ಆಯ್ಕೆಯಾದ ಅಭ್ಯರ್ಥಿಗೆ ಮಾಸಿಕ 50 ಸಾವಿರ ರೂ.ಗಳನ್ನು ವೇತನವನ್ನು ನೀಡಲಾಗುವುದು.

ಅಭ್ಯರ್ಥಿಗಳು ಅರ್ಜಿಯನ್ನು ಜಾಲತಾಣ ವಿಳಾಸ: https://raichur.nic.in ನಲ್ಲಿ ಪಡೆದು ಜುಲೈ 17ರ ಸಂಜೆ 5.30 ರೊಳಗಾಗಿ ಜಿಲ್ಲಾಧಿಕಾರಿ ಕಚೇರಿ, ಜಿಲ್ಲಾಡಳಿತ ಕಟ್ಟಡ, ನೆಲ ಮಹಡಿ, ಕೊಠಡಿ ಸಂಖ್ಯೆ–ಸಿ–15, ಯಕಲಾಸ್‌ಪುರ, ರಾಯಚೂರು–584101 ಇಲ್ಲಿಗೆ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜುಲೈ 11 ರಂದು ನೇರ ಸಂದರ್ಶನ

**ರಾಯಚೂರು,ಜು.8–** ಇಲ್ಲಿನ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ವಿನಿಮಯ ಇಲಾಖೆ ಕಚೇರಿಯಲ್ಲಿ ಜುಲೈ 11ರ ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 2 ಗಂಟೆವರೆಗೆ ನೇರ ಸಂದರ್ಶನವನ್ನು ಆಯೋಜನೆ ಮಾಡಿಲಾಗಿದ್ದು, ಆಸಕ್ತ ಯುವಕ ಅಥವಾ ಯುವತಿಯರು ಭಾಗಹಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿಗಳು ತಿಳಿಸಿದ್ದಾರೆ.

ನೇರ ಸಂದರ್ಶನದಲ್ಲಿ ಅನೇಕ ಖಾಸಗಿ ಸಂಸ್ಥೆಗಳು ಭಾಗಿಯಾಗುತ್ತಿದ್ದು, ತಮ್ಮ ಕಂಪನಿಯಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.

18 ರಿಂದ 28 ವರ್ಷಗಳವರೆಗಿನ ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ. ವಿದ್ಯಾರ್ಹತೆಯ ಅಂಕ ಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ಬಯೋಡಾಟಾ, ಆಧಾರ್ ಕಾರ್ಡ್ ಪ್ರತಿ ಹಾಗೂ ಭಾವಚಿತ್ರಗಳೊಂದಿಗೆ ಆಗಮಿಸಬೇಕು.

ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಈ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ; 08532–231684, 9008211750, 8095125775ಗೆ ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಯಚೂರಿನ ಕೈಗಾರಿಕಾ ತರಬೇತಿ ಸಂಸ್ಥೆಯಿಂದ ಸಂದರ್ಶನ

**ರಾಯಚೂರು,ಜು.8–**ಇಲ್ಲಿನ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಬೆಂಗಳೂರಿನ ಓಮ್ನಿ ಮ್ಯಾಟ್ರಿಕ್ಸ್ ಪ್ರೈ.ಲಿ. ವತಿಯಿಂದ ಶಿಶುಕ್ಷು ತರಬೇತಿಗಾಗಿ ಜುಲೈ 10ರಂದು ಸಂದರ್ಶನವನ್ನು ಹಮ್ಮಿಕೊಳ್ಳಲಾಗಿದ್ದು ಆಸಕ್ತರು ಭಾಗವಹಿಸಬಹುದಾಗಿದೆ.

ಐಟಿಐ ಪಾಸಾದ ತರಬೇತುದಾರರಿಗೆ ತಮ್ಮ ಕಂಪನಿಯಲ್ಲಿ ಶಿಶುಕ್ಷು ತರಬೇತಿಗಾಗಿ ಸಂದರ್ಶನವನ್ನು ನಡೆಸಲಿದ್ದಾರೆ. ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು ತಮ್ಮ ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ, ಐಟಿಐ ಪಾಸಾದ ಅಂಕಪಟ್ಟಿ, ಆಧಾರ್ ಕಾರ್ಡ, ಬಯೋಡಾಟ, 02 ಭಾವಚಿತ್ರಗಳು ಬ್ಯಾಂಕ್ ಪಾಸ್ ಬುಕ್, ಗುರುತಿನ ಚೀಟಿ ದಾಖಲಾತಿಗಳೊಂದಿಗೆ ಜುಲೈ 10ರ ಬೆಳಿಗ್ಗೆ 10 ಗಂಟೆಗೆ ತರಬೇತಿದಾರರು ಸಂದರ್ಶನದಲ್ಲಿ ಭಾಗವಹಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 9449185499 ಅಥವಾ 9743304428ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ದರ್ಜೆ–01ರ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜುಲೈ 09ರಂದು ನಗರದ ವಿವಿಧೆಡೆ ವಿದ್ಯುತ್ ವ್ಯತ್ಯಯ

**ರಾಯಚೂರು,ಜು.8–** ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗದ–2ರ ವ್ಯಾಪ್ತಿಯ 20ಎಮ್‌ವಿಎ ನಿರ್ವಹಣೆ 110/33 ಕೆವಿ ಉಪಕೇಂದ್ರದಲ್ಲಿ ಜವಾಹರ ನಗರ ವಿದ್ಯುತ್ ಮಾರ್ಗದ ಪರಿವರ್ತಕ ಬದಲಾವಣೆಯ ಕಾಮಗಾರಿಯನ್ನು ಕೈಗೊಂಡ ಪ್ರಯುಕ್ತ ಜುಲೈ 09ರ ಬೆಳಿಗ್ಗೆ 10 ಗಂಟೆಯಿಂದ ಸಂಜೆ 5ಗಂಟೆವರೆಗೆ ವಿದ್ಯುತ್ ವ್ಯತ್ಯಯ ಉಂಟಾಗುಲಿದ್ದು ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ.

ಅಂದು ಬೆಳಿಗ್ಗೆ ತಾಯಮ್ಮಗುಡಿ, ದೇವಿನಗರ, ಅಶ್ವಿನಿ ಕಾಲೋನಿ, ಅಗ್ರೀಗೋಲ್ಡ್, ಗದ್ವಾಲ ರೋಡ, ಎಮ್.ವಿ.ಜಿ. ಲೇಔಟ್, ಜವಾಹರ ನಗರ, ಹನುಮಾನ ಟಾಕೀಸ್, ಎನ್.ಜಿ.ಓ ಕಾಲೋನಿ, ವಾಸವಿ ನಗರಚಾಂನಿಕ್ ಪುರಿ ಲೇಔಟ್, ಬೋಳಂದೊಡ್ಡಿ ರೋಡ್ ಸೇರಿದಂತೆ ಸುತ್ತಲಿನ ಎಲ್ಲಾ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಹೆಚ್ಚಿನ ಮಾಹಿತಿಗಾಗಿ 24*7 ಗ್ರಾಹಕರ ನಿರಂತರ ಸೇವಾ ಕೇಂದ್ರದ ದೂರವಾಣಿ ಸಂಖ್ಯೆ: 08532–226386 ಅಥವಾ 08532–231999ಗೆ ಸಂಪರ್ಕಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗದ–2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

9743497111, 9743496111

# ಕೈಗಾರಿಕೆಗಳ ಅಭಿವೃದ್ಧಿಗೆ ಭೂಸ್ವಾಧೀನಕ್ಕೆ ಸಹಕರಿಸಿ : ಸಚಿವ ಎಂ.ಬಿ.ಪಾಟೀಲ್

**ಬೆಂಗಳೂರು,ಜು.8–** ಆಂಧ್ರಪ್ರದೇಶದಲ್ಲಿ ಕೈಗಾರಿಕೆಗಳಿಗೆ ಪ್ರತಿ ಎಕರೆಗೆ 99 ಪೈಸೆಯಂತೆ 10 ಸಾವಿರ ಎಕರೆಗಳನ್ನು ನೀಡಲಾಗುತ್ತಿದೆ. ಇಂತಹ ಪೈಪೋಟಿ ಇರುವಾಗ ನಮ್ಮಲ್ಲಿ ಭೂಸ್ವಾಧೀನಕ್ಕೆ ವಿರೋಧ ವ್ಯಕ್ತಪಡಿಸುವುದು ಕೈಗಾರಿಕೆಗಳ ಬೆಳವಣಿಗೆ ದೃಷ್ಟಿಯಿಂದ ಸರಿಯಲ್ಲ ಎಂದು ಸಚಿವ ಎಂ.ಬಿ.ಪಾಟೀಲ್ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಕಾಶ್‌ರಾಜ್ ಬಹುಭಾಷಾ ನಟರು. ಕನ್ನಡಕ್ಕಿಂತಲೂ ತೆಲುಗಿನಲ್ಲೆ ಹೆಚ್ಚು ಅಭಿನಯಿಸಿದ್ದಾರೆ. ದೇವನಹಳ್ಳಿ ಭೂಸ್ವಾಧೀನ ಪ್ರಕ್ರಿಯೆ ವಿರೋಧಿಸಿ ಹೋರಾಟ ಮಾಡುತ್ತಿದ್ದಾರೆ. ಪ್ರಜಾಪ್ರಭುತ್ವದಲ್ಲಿ ಹೋರಾಟಕ್ಕೆ ಅವರಿಗೆ ಹಕ್ಕಿದೆ. ಆಂಧ್ರಪ್ರದೇಶದಲ್ಲಿ 45 ಸಾವಿರ ಎಕರೆ ಭೂಸ್ವಾಧೀನವಾಗುತ್ತಿದೆ. ಅದರ ವಿರುದ್ಧ ಹೋರಾಟ ಮಾಡಲಿ ಎಂದು ತಿಳಿಸಿದರು.



ವೈಮಾನಿಕ ಕ್ಷೇತ್ರದಲ್ಲಿ ಕರ್ನಾಟಕ ಶೇ.65 ರಷ್ಟು ಪಾಲು ಹೊಂದಿದ್ದು, ಜಾಗತಿಕವಾಗಿ ಮೂರನೇ ಸ್ಥಾನದಲ್ಲಿದ್ದೇವೆ. ಎಚ್‌ಎಎಲ್, ಸಾಫ್ರಾ, ಏರ್‌ಬಸ್, ಬೋಯಿಂಗ್, ಲಾಕೆಟ್‌ಮಾರ್ಟಿನ್, ಕಾಲಿನ್ ಸೇರಿದಂತೆ ಹಲವಾರು ಸಂಸ್ಥೆಗಳು ನಮ್ಮಲ್ಲಿವೆ. ಅದನ್ನು ಮತ್ತಷ್ಟು ಅಭಿವೃದ್ಧಿಪಡಿಸುವ ಉದ್ದೇಶ ಹೊಂದಿದ್ದೇವೆ ಎಂದರು.

ಆಂಧ್ರಪ್ರದೇಶದ ಚಂದ್ರಬಾಬು ನಾಯ್ಡು 10 ಸಾವಿರ ಎಕರೆಯಷ್ಟು ಉಚಿತ ಭೂಮಿ ನೀಡುತ್ತಿದ್ದಾರೆ. ಟಿಸಿಎಸ್ ಇನ್ಫೊಸಿಸ್‌ನಂತಹ ಕಂಪನಿಗಳಿಗೆ ಎಕರೆಗೆ 89 ಪೈಸೆಯಂತೆ ಭೂಮಿ ನೀಡುತ್ತಿದ್ದಾರೆ. ಅದರ ವಿರುದ್ಧವೂ ಹೋರಾಟ ನಡೆಸಬೇಕಾಗಿದೆ ಎಂದರು.

ಎಚ್‌ಎಎಲ್ ಸಂಸ್ಥೆ ಆಂಧ್ರಪ್ರದೇಶಕ್ಕೆ ಬರಬೇಕು ಎಂದು ಒತ್ತಡ ಹೇರಲಾಗಿತ್ತು. ನಾನು ಎಚ್‌ಎಎಲ್‌ನ ಅಧ್ಯಕ್ಷರನ್ನು ಭೇಟಿ ಮಾಡಿ ಹೆಚ್ಚುವರಿ ಭೂಮಿ ಸೇರಿದಂತೆ ಎಲ್ಲಾ ರೀತಿಯ ಸೌಲಭ್ಯ ಒದಗಿಸಲು ಬದ್ಧವಾಗಿದ್ದೇನೆ ಎಂದು ಭರವಸೆ ನೀಡಿದ್ದೇನೆ. ಅದರಿಂದ ಅವರು ಸಮಾಧಾನವಾಗಿದ್ದಾರೆ. ನಾವು ಪೈಪೋಟಿಯ ಪ್ರಪಂಚದಲ್ಲಿದ್ದೇವೆ ಎಂದು ಹೇಳಿದರು.

ಏರೋಸ್ಪೇಸ್‌ಗಾಗಿ ದೇವನಹಳ್ಳಿ ಬಳಿ ಭೂಸ್ವಾಧೀನವಾಗುತ್ತಿದೆ. ಆಂಧ್ರಪ್ರದೇಶ, ತೆಲಂಗಾಣ ರಾಜ್ಯಗಳು ನಮಗೆ ಪೈಪೋಟಿ ನೀಡುತ್ತಿವೆ. ಹೀಗಾಗಿ ನಾವು ಹೆಚ್ಚು ಸೌಲಭ್ಯಗಳನ್ನು ಕಲ್ಪಿಸಬೇಕು. ಪ್ರಕಾಶ್‌ರಾಜ್‌ರವರ ಪ್ರಭಾವ ತೆಲುಗು ನಾಡಿನಲ್ಲಿ ಹೆಚ್ಚಿದೆ. ಅಲ್ಲಿನ ಭೂಸ್ವಾಧೀನಗಳ ವಿರುದ್ಧ ಹೋರಾಟ ನಡೆಸಲಿ. ಇದರ ಹೊರತಾಗಿ ತಮಗೆ ಪ್ರಕಾಶ್‌ರಾಜ್ ವಿರುದ್ಧ ವೈಯಕ್ತಿಕವಾದ ಯಾವುದೇ ದ್ವೇಷವಿಲ್ಲ ಎಂದರು.

ರೈತರಿಗೆ 2013ರ ಭೂಸ್ವಾದಿಧಿನ ಕಾಯ್ದೆಯಡಿಯಲ್ಲಿ ರೈತರಿಗೆ ಪರಿಹಾರ ನೀಡುತ್ತಿದ್ದೇವೆ. ಕೈಗಾರಿಕಾ ಸಚಿವನಾಗಿ ನನ್ನ ಜವಾಬ್ದಾರಿಯನ್ನು ನಾನು ನಿಭಾಯಿಸುತ್ತಿದ್ದೇನೆ. ಹಿಂದೆ ನೀರಾವರಿ ಸಚಿವನಾಗಿದ್ದಾಗ ಆ ಕೆಲಸವನ್ನೂ ಪ್ರಾಮಾಣಿಕವಾಗಿ ಮಾಡಿದ್ದೇ ನೆ ಎಂದು ತಿಳಿಸಿದರು. ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುಜೇರ್ವಾಲ ಬೆಂಗಳೂರಿಗೆ ಬಂದು ಶಾಸಕರ ಜೊತೆ ಸಮಾಲೋಚನೆ ನಡೆಸುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಬಿಜೆಪಿಯಲ್ಲಿ ವರಿಷ್ಠರು ಬಂದಾಗ ಆ ಪಕ್ಷದ ಶಾಸಕರು ಭೇಟಿಯಾಗುವುದಿಲ್ಲವೇ? ಕಾಂಗ್ರೆಸ್‌ನ ಶಾಸಕರ ಭೇಟಿಗೆ ಮಾತ್ರ ಟೀಕೆಗಳು ಏಕೆ? ಎಂದು ಪ್ರಶ್ನಿಸಿದರು.

ಬಸವರಾಜರಾಯರೆಡ್ಡಿ ಮುಖ್ಯಮಂತ್ರಿಯವರ ಆಪ್ತರು, ಹಣಕಾಸಿನ ಸಲಹೆಗಾರರು, ಮಾಧ್ಯಮಗಳನ್ನು ದಾರಿ ತಪ್ಪಿಸಲು ಗ್ಯಾರಂಟಿ ಯೋಜನೆಗಳ ಬಗ್ಗೆ ಹೇಳಿಕೆ ನೀಡಿರಬಹುದು, ಅವರು ಹೇಳಿರುವುದರಲ್ಲಿ ಸತ್ಯಾಂಶವಿಲ್ಲ ಎಂದು ಹೇಳಿದರು.ರಸ್ತೆ ಅಭಿವೃದ್ಧಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಯೊಂದು ಕ್ಷೇತ್ರಕ್ಕೂ ತಲಾ 50 ಕೋಟಿ ರೂ.ಗಳನ್ನು ನೀಡುತ್ತಿದ್ದಾರೆ. ಹೀಗಾಗಿ ರಸ್ತೆ ಅಭಿವೃದ್ಧಿಗೆ ಹಣಕಾಸಿನ ಕೊರತೆ ಇದೆ ಎಂಬುದು ಸರಿಯಲ್ಲ ಎಂದರು. ನಾಯಕರ ಬದಲಾವಣೆಯ ಪ್ರಶ್ನೆಯೇ ಇಲ್ಲ. ಮುಖ್ಯಮಂತ್ರಿ ಹುದ್ದೆ ಖಾಲಿ ಇಲ್ಲ. ಸಿದ್ದರಾಮಯ್ಯ ಆಡಳಿತ ನಡೆಸುತ್ತಿದ್ದಾರೆ. ಈ ಮಧ್ಯೆ ಎಂ.ಬಿ. ಪಾಟೀಲ್ ಮುಖ್ಯಮಂತ್ರಿ ಹುದ್ದೆಯ ಆಕಾಂಕ್ಷಿ ಎಂಬುದು ಅಪ್ರಸ್ತುತ ಎಂದು ಹೇಳಿದರು.ಉಚಿತ ಯೋಜನೆಗಳಿಂದ ಜನ ಸೋಮಾರಿಗಳಾಗುತ್ತಿದ್ದಾರೆ ಎಂಬ ರಂಭಾಪುರಿ ಶ್ರೀಗಳ ಹೇಳಿಕೆಯನ್ನು ನಾನು ಒಪ್ಪುವುದಿಲ್ಲ. ರಂಭಾಪುರಿ ಶ್ರೀಗಳು ನಮವರೇ. ಆದರೆ ಬಡತನದ ಬಗ್ಗೆ ಅರಿವಿಲ್ಲ. ಬಡತನ ಎಲ್ಲಾ ಕಡೆ ಇದೆ. ಉಚಿತ ಯೋಜನೆಗಳಿಂದ ಜನ ಸೋಮಾರಿಗಳಾಗಿದ್ದಾರೆ ಎನ್ನುವುದು ಸರಿಯಲ್ಲ ಎಂದರು.

# ಆರ್‌ಸಿಬಿ ಬೌಲರ್ ಯಶ್ ದಯಾಳ್ ವಿರುದ್ಧ ಅತ್ಯಾಚಾರ ಪ್ರಕರಣ

**ಗಾಜಿಯಾಬಾದ್,ಜು.8–** ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ಪರ ಆಡುವ ಕ್ರಿಕೆಟಿಗ ಯಶ್ ದಯಾಳ್ ವಿರುದ್ಧ ಮಹಿಳೆಯೊಬ್ಬರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ ಎಫ್‌ಐಆರ್ ದಾಖಲಿಸಲಾಗಿದೆ.

ಬಿಎನ್‌ಎಸ್ ಸೆಕ್ಷನ್ 69 (ವಿವಾಹದ ಸುಳ್ಳು ಭರವಸೆ ಸೇರಿದಂತೆ ಮೋಸದ ವಿಧಾನಗಳಿಂದ ಲೈಂಗಿಕ ಸಂಭೋಗ) ಅಡಿಯಲ್ಲಿ ಉತ್ತರ ಪ್ರದೇಶದ ಇಂದಿರಾಪುರಂ ಪೊಲೀಸ್ ಠಾಣೆಯಲ್ಲಿ ದಯಾಳ್ (27) ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಐಜಿಆರ್‌ಎಸ್ (ಸಮಗ್ರ ದೂರು ಪರಿಹಾರ ವ್ಯವಸ್ಥೆ) ಮೂಲಕ ಮಹಿಳೆಯೊಬ್ಬರು ಜೂನ್ 21 ರಂದು ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರಿಗೆ ದೂರು ನೀಡಿದ ನಂತರ, ಐದು ವರ್ಷಗಳ ಕಾಲ ಸಂಬಂಧ ಹೊಂದಿದ್ದ ಕ್ರಿಕೆಟಿಗ ತನ್ನನ್ನು ದೈಹಿಕವಾಗಿ ಶೋಷಿಸಿದ್ದಾರೆ ಎಂದು ಆರೋಪಿಸಿ ಈ ಕ್ರಮ ಕೈಗೊಳ್ಳಲಾಗಿದೆ.

ಪ್ರತಿಕ್ರಿಯೆಗಳಿಗಾಗಿ ದಯಾಳ್ ಅವರನ್ನು ಸಂಪರ್ಕಿಸಲು ಸಾಧ್ಯವಾಗಲಿಲ್ಲ. ಈ ಬಾರಿ ಆರ್‌ಸಿಬಿ ಐಪಿಎಲ್ ಕಪ್ ಗೆಲ್ಲುವಲ್ಲಿಯೂ ಯಶ್ ದಯಾಳ್ ಪ್ರಮುಖ ಪಾತ್ರ ವಹಿಸಿದ್ದರು. ಈ ಬೆಳವಣಿಗೆ ನಂತರ




ಅವರು ಉತ್ತಮ ಕ್ರಿಕೆಟಿಗನಾಗಿ ರೂಪುಗೊಳ್ಳುವ ಸಾಧ್ಯತೆಯೂ ಇತ್ತು. ಆದರೆ, ಇದೀಗ ಅವರ ವಿರುದ್ಧ ರೇಪ್ ಕೇಸ್ ದಾಖಲಾಗಿರುವುದು ಅವರ ಭವಿಷ್ಯದ ಮೇಲೆ ಕರಿನೆರಳು ಬಿದ್ದಾಂತಾಗಿದೆ.

# ನರೇಗಾ ಯೋಜನೆ : ಸಾವಿರ ಕೋಟಿ ಭ್ರಷ್ಟಾಚಾರ: ರಾಜೀವ್ ಆರೋಪ

**ಬೆಂಗಳೂರು, ಜು. 8–** ನರೇಗಾ ಯೋಜನೆಯಡಿ ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ಸಾವಿರ ಕೋಟಿ ರೂ.ಗಳಿಗಿಂತ ಹೆಚ್ಚಿನ ಭ್ರಷ್ಟಾಚಾರ ನಡೆದಿದೆ ಎಂದು ಬಿಜೆಪಿಯ ರಾಜ್ಯ ಪ್ರಧಾನ ಕಾರ್ಯದರ್ಶಿ ಹಾಗೂ ಮಾಜಿ ಶಾಸಕ ಪಿ. ರಾಜೀವ್ ಆರೋಪಿಸಿದ್ದಾರೆ.

ಬೆಂಗಳೂರಿನ ಬಿಜೆಪಿ ಕಚೇರಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಚಿವ ಪ್ರಿಯಾಂಕ ಖರ್ಗೆ ಅವರ ಇಲಾಖೆಯಲ್ಲೇ ಭ್ರಷ್ಟಾಚಾರ ನಡೆದಿದೆ. ಕುಡಚಿ ಗ್ರಾಮ ಪಂಚಾಯ್ತಿ ಒಂದರಲ್ಲೇ 17 ಕೋಟಿ ರೂ. ಭ್ರಷ್ಟಾಚಾರ ಆಗಿದೆ ಎಂದು ಅವರು ದಾಖಲೆಗಳನ್ನು ಬಿಡುಗಡೆ ಮಾಡಿದರು.

ಯಾರದ್ದೊ ಹೆಸರಿಗೆ ಹಣ ವರ್ಗಾವಣೆ ಮೂಲಕ ಅಕ್ರಮ ಎಸಗಲಾಗಿದೆ. ನಕಲಿ ಫಲಾನುಭವಿಗಳ ಕೂಲಿ ಹಣ ನೀಡಲಾಗಿದೆ. ಕಾಮಗಾರಿ ನಡೆಸದೆ ಬಿಲ್‌ಗಳನ್ನು ಪಾವತಿ ಮಾಡಲಾಗಿದೆ. ಒಂದೇ ವ್ಯಕ್ತಿಯ ಫೋಟೋ ಮತ್ತು ಹಲವು ಹೆಸರುಗಳಿಗೆ ದಾಖಲೆ ಸೃಷ್ಟಿಸಿ ಭ್ರಷ್ಟಾಚಾರ ಎಸಗಲಾಗಿದೆ ಎಂದು ಅವರು ಹೇಳಿದರು.



ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ನಡೆದಿರುವ ಅಕ್ರಮಕ್ಕೆ ಸಂಬಂಧಿಸಿದಂತೆ ಯಾರನ್ನು ಅಮಾನತು ಮಾಡುತ್ತೀರಿ ಎಂದು ಸಚಿವ ಪ್ರಿಯಾಂಕ ಖರ್ಗೆ ಅವರನ್ನು ಪ್ರಶ್ನಿಸಿದ ಅವರು, ಸಚಿವರ ಸಹಕಾರದಿಂದಲೇ ಭ್ರಷ್ಟಾಚಾರ ನಡೆದಿದೆ ಎಂದು ದೂರಿದರು.ನರೇಗಾ ಹಗರಣದ ಬಗ್ಗೆ ನಾವು ದೂರು ಕೊಟ್ಟಿದ್ದರೂ ಇದುವರೆಗೂ ತನಿಖೆಯಾಗಿಲ್ಲ. ಸಚಿವರಾದಿಯಾಗಿ ಎಲ್ಲರೂ ಭ್ರಷ್ಟಾಚಾರದಲ್ಲಿ ಭಾಗಿಯಾಗಿದ್ದಾರೆ. ಖರ್ಗೆ ಸ್ಥಳಕ್ಕೆ ಭೇಟಿ ನೀಡಿ ನ ಮ್ಮ ಆರೋಪಕ್ಕೆ ಉತ್ತರ ಕೊಡುವ ಧೈರ್ಯ ಇದೆಯೇ ಎಂದು ಪ್ರಶ್ನಿಸಿದರು. ಬಿಜೆಪಿ ಅಧಿಕಾರದಲ್ಲಿದ್ದಾಗ ಪಿಸಿಎಂ ಕ್ಯೂ ಆರ್ ಕೋಡ್ ಮಾಡಿ ಕಾಂಗ್ರೆಸ್‌ನಿಂದ ಪೋಸ್ಟರ್ ಅಂಟಿಸಲಾಗಿತ್ತು. ಈಗ ಬಿಜೆಪಿ ಪಿಕ್ಯೂಆರ್ ಕೋಡ್‌ನ್ನು ಮಾಡಿ ಬಿಜೆಪಿ ಎಲ್ಲಿ ಹಚ್ಚಬೇಕು ಎಂಬುದನ್ನು ಪ್ರಿಯಾಂಕ ಖರ್ಗೆ ಹೇಳಲಿ ಎಂದು ಅವರು ಒತ್ತಾಯಿಸಿದರು.

# ಕನ್ವರ್ ಯಾತ್ರೆ : ಮಾಂಸದ ಅಂಗಡಿಗಳಿಗೆ ನಿರ್ಬಂಧ

**ನವದೆಹಲಿ,ಜು.8–** ಇದೇ ಜುಲೈ 11 ರಿಂದ 23 ರವರೆಗೆ ನಡೆಯಲಿರುವ ಕನ್ವರ್ ಯಾತ್ರೆಯ ಸಮಯದಲ್ಲಿ ಮಾಂಸದ ಅಂಗಡಿಗಳು ತೆರೆದಿರಲು ಆಡಳಿತವು ಅನುಮತಿಸುವುದಿಲ್ಲ ಎಂದು

ದೆಹಲಿ ಸಚಿವ ಕಪಿಲ್ ಮಿಶ್ರಾ ಹೇಳಿದ್ದಾರೆ. ಆದಾಗ್ಯೂ, ಕನ್ವರ್ ಯಾತ್ರೆ ಮಾರ್ಗದಲ್ಲಿರುವ ಮಾಂಸದ ಅಂಗಡಿಗಳಿಗೆ ಮಾತ್ರ ನಿಷೇಧ ಅನ್ವಯಿಸುತ್ತದೆಯೇ ಎಂದು ಅವರು ಸ್ಪಷ್ಟಪಡಿಸಿಲ್ಲ.ಕನ್ವರ್ ಯಾತ್ರೆಯ ಸಮಯದಲ್ಲಿ ದೆಹಲಿಯಲ್ಲಿ ಮಾಂಸದ ಅಂಗಡಿಗಳು ಮುಚ್ಚಿರುತ್ತವೆ. ಇದು ನಮ ನಿರ್ಧಾರ. ಈ ಮಾಂಸದ ಅಂಗಡಿಗಳಲ್ಲಿ ಹೆಚ್ಚಿನವು ಕಾನೂನುಬಾಹಿರವಾಗಿವೆ. ಕಾನೂನಿನ ಪ್ರಕಾರ ಕಾರ್ಯ ನಿರ್ವಹಿಸಬಾರದು ಎಂದು ಮಿಶ್ರಾ ಸುದ್ದಿಗಾರರಿಗೆ ತಿಳಿಸಿದರು.

ಆದರೆ ಕನ್ವರ್ ಯಾತ್ರೆಯ ಸಮಯದಲ್ಲಿ, ಅವುಗಳನ್ನು ವಿಶೇಷವಾಗಿ ಮುಚ್ಚಲಾಗುವುದು. ಎಲ್ಲರೂ ಕಾನೂನನ್ನು ಪಾಲಿಸಬೇಕು. ಇವೆಲ್ಲವೂ ಅಕ್ರಮ ಅಂಗಡಿಗಳು, ಮತ್ತು ಕನ್ವರ್ ಯಾತ್ರೆಯ ಸಮಯದಲ್ಲಿ ಅವು ಕಾರ್ಯನಿರ್ವಹಿಸಲು ನಾವು ಅನುಮತಿಸುವುದಿಲ್ಲ ಎಂದು ಪುನರುಚ್ಚರಿಸಿದರು.

ಇದಕ್ಕೂ ಮುನ್ನ, ದೆಹಲಿ ಬಿಜೆಪಿ ಶಾಸಕ ತರವಿಂದರ್ ಸಿಂಗ್ ಮಾರ್ವಾ ಅವರು ಕೇಂದ್ರ ಗೃಹ ಸಚಿವರಿಗೆ ಪತ್ರ ಬರೆದು, ರಾಷ್ಟ್ರ ರಾಜಧಾನಿಯ ಕನ್ವರ್ ಯಾತ್ರೆ ಮಾರ್ಗಗಳಲ್ಲಿರುವ ಎಲ್ಲಾ ಮದ್ಯ ಮತ್ತು ಮಾಂಸದ ಅಂಗಡಿಗಳನ್ನು ತಾತ್ಕಾಲಿಕವಾಗಿ ಮುಚ್ಚುವಂತೆ ಕೋರಿದ್ದರು.ಈ ತಿಂಗಳ ಕೊನೆಯಲ್ಲಿ ಪ್ರಾರಂಭವಾಗಲಿರುವ ಕನ್ವರ್ ಯಾತ್ರೆಯ ಮಾರ್ಗಗಳಲ್ಲಿರುವ ಎಲ್ಲಾ ಮದ್ಯ




ಮತ್ತು ಮಾಂಸದ ಅಂಗಡಿಗಳನ್ನು ತಾತ್ಕಾಲಿಕವಾಗಿ ಮುಚ್ಚುವಂತೆ ದೆಹಲಿ ಬಿಜೆಪಿ ಶಾಸಕ ತರವಿಂದರ್ ಸಿಂಗ್ ಮಾರ್ವಾ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ಪತ್ರ ಬರೆದಿದ್ದರು. ಮದ್ಯ ಮತ್ತು ಮಾಂಸದ ಅಂಗಡಿಗಳ ಮೇಲೆ ತಾತ್ಕಾಲಿಕ ನಿಷೇಧ ಹೇರುವುದರಿಂದ ಯಾತ್ರೆಯ ಪಾವಿತ್ರ್ಯವನ್ನು ಎತ್ತಿಹಿಡಿಯಲು ಮತ್ತು ಯಾವುದೇ ಅಹಿತಕರ ಘಟನೆಗಳನ್ನು ತಡೆಯಲು ಸಹಾಯವಾಗುತ್ತದೆ ಎಂದು ಮಾರ್ವಾ ಹೇಳಿದ್ದಾರೆ. ಕನ್ವರ್ ಯಾತ್ರೆಯ ಪಾವಿತ್ರ್ಯವನ್ನು ಕಾಪಾಡಿಕೊಳ್ಳಲು ಮತ್ತು ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಕನ್ವರ್ ಯಾತ್ರೆಯ ಗೊತ್ತುಪಡಿಸಿದ ಮಾರ್ಗಗಳಲ್ಲಿನ ಮಾಂಸ ಮತ್ತು ಮದ್ಯದ ಅಂಗಡಿಗಳನ್ನು ತಾತ್ಕಾಲಿಕವಾಗಿ ಮುಚ್ಚಬೇಕೆಂದು ನಾವು ಮನವಿ ಮಾಡುತ್ತೇವೆ ಎಂದು ಶಾಸಕರು ಶಾಗೆ ಪತ್ರ ಬರೆದಿದ್ದಾರೆ.

# ವಿಂಬಲ್ಡನ್ ವೀಕ್ಷಿಸಿದ ವಿರಾಟ್ ಕೊಹ್ಲಿ ದಂಪತಿ

**ಲಂಡನ್,ಜು.8–** ವಿಂಬಲ್ಡನ್ 2025 ರಲ್ಲಿ ಅಲೆಕ್ಸ್ ಡಿ ಮಿನೌರ್ ವಿರುದ್ಧದ 16 ರ ಸುತ್ತಿನ ಪಂದ್ಯದಲ್ಲಿ ನೊವಾಕ್ ಜೊಕೊವಿಕ್ ಅದ್ಭುತ ಪ್ರದರ್ಶನ ನೀಡಿದಾಗ ವಿರಾಟ್ ಕೊಹ್ಲಿ ಮತ್ತು ಅನುಷ್ಕಾ ಶರ್ಮಾ ಸೇರಿದಂತೆ ಅನೇಕ ತಾರಾ ಪ್ರೇಕ್ಷಕರು ಉಪಸ್ಥಿತರಿದ್ದರು. ಪ್ರಸ್ತುತ ಲಂಡನ್‌ನಲ್ಲಿರುವ ವಿರಾಟ್, ತಮ್ಮ ಪತ್ನಿ ಅನುಷ್ಕಾ ಅವರೊಂದಿಗೆ ಸ್ಟ್ಯಾಂಡ್‌ಗಳಿಂದ ಹರ್ಷೋದ್ಗಾರ ಮಾಡುತ್ತಿರುವುದು ಕಂಡುಬಂದಿದೆ.

ವಿಂಬಲ್ಡನ್ ಪಂದ್ಯವು ನಿರೀಕ್ಷೆಗಳಿಗೆ ತಕ್ಕಂತೆ ನಡೆದಿದೆ. 24 ಬಾರಿಯ ಗ್ರ್ಯಾಂಡ್ ಸ್ಲ್ಯಾಮ್ ಚಾಂಪಿಯನ್ ಜೊಕೊವಿಕ್ ಮೊದಲ ಸೆಟ್ 1–6 ಅಂತರದಿಂದ ಸೋತ ನಂತರ ಮುಂದಿನ ಮೂರು ಸೆಟ್‌ಗಳನ್ನು 6–4, 6–4, 6–4 ಅಂತರದಲ್ಲಿ ಗೆದ್ದಿದ್ದಾರೆ. ವಿರಾಟ್ ಕೊಹ್ಲಿ ಸರ್ಬಿಯನ್ ಆಟಗಾರನ ಪ್ರತಿಭೆಯಿಂದ ಪ್ರಭಾವಿತರಾಗಿ ಅವರು ಇನ್‌ಸ್ಟಾಗ್ರಾಮ್‌ನಲ್ಲಿ ಎಂತಹ ಪಂದ್ಯ. ಗ್ಲಾಡಿಯೇಟರ್‌ಗೆ ಇದು ಯಾವಾಗಲೂ ಒಂದೇ ಆಗಿತ್ತು ಎಂದು ಪೋಸ್ಟ್ ಮಾಡಿದ್ದಾರೆ.

ಸೆಂಟರ್ ಕೋರ್ಟ್ ಸ್ಟ್ಯಾಂಡ್‌ಗಳಲ್ಲಿ ವಿರಾಟ್ ಮತ್ತು ಅನುಷ್ಕಾ ಸ್ಟೈಲಿಶ್ ಆಗಿ ಕಾಣುತ್ತಿದ್ದರು. ವಿರಾಟ್ ಕ್ಲಾಸಿ ಟೈಲರ್ಡ್ ಟ್ಯಾನ್ ಬ್ರೌನ್ ಬ್ಲೇಜರ್ ಧರಿಸಿದ್ದರು, ಅದನ್ನು ಅವರು ಬಿಳಿ ಶರ್ಟ್ ಮತ್ತು ಪ್ಯಾಟರ್ನ್ಡ್ ಗ್ರೇಟೈ ಮೇಲೆ ಧರಿಸಿದ್ದರು. ವ್ಯಾಚಿಂಗ್ ಪ್ಯಾಂಟ್ ಜೊತೆಗೆ. ಅವರ ಅಚ್ಚುಕಟ್ಟಾಗಿ ಸ್ಟೈಲ್ ಮಾಡಿದ ಕೂದಲು ಮತ್ತು ಚೂಪಾದ ಗಡ್ಡ ಅವರ ಲುಕ್ ಸಂಪೂರ್ಣವಾಗಿ ಪೂರ್ಣಗೊಳಿಸಿದೆ. ಅವರ ಪಕ್ಕದಲ್ಲಿ ಕುಳಿತಿದ್ದ ಅನುಷ್ಕಾ, ಬಿಳಿ ಸ್ಟ್ರಕ್ಚರ್ಡ್ ಬ್ಲೇಜರ್ ಮತ್ತು ಮ್ಯಾಚಿಂಗ್ ಟಾಪ್‌ನಲ್ಲಿ ಸುಂದರವಾಗಿ ಕಾಣುತ್ತಿದ್ದರು.ವಿರಾಟ್ ಮತ್ತು ಅನುಷ್ಕಾ ಅವರಿಗಿಂತ ಮೊದಲು, ಪ್ರಿಯಾಂಕಾ ಚೋಪ್ರಾ ಮತ್ತು ನಿಕ್ ಜೋನಾಸ್, ಕೇಟ್ ಬ್ಲಾಂಚೆಟ್, ರೆಬೆಲ್ ವಿಲ್ಸನ್ ಮತ್ತು ಸರ್ ಡೇವಿಡ್ ಬೆಕ್‌ಹ್ಯಾಮ್ ಕೂಡ ಟೆನಿಸ್ ಆಕ್ಷನ್ ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ 8 ಬಾರಿ ವಿಂಬಲ್ಡನ್ ಚಾಂಪಿಯನ್ ರೋಜರ್ ಫೆಡರರ್ ಕೂಡ ಈ ಸಂದರ್ಭದಲ್ಲಿ ಹಾಜರಿದ್ದರು



# ಸರ್ಕಾರದ ವಿರುದ್ಧ ಸಿಡಿದೆದ್ದು ಬೀದಿಗಿಳಿದ 25 ಸಾವಿರ ಮಹಾನಗರ ಪಾಲಿಕೆ ನೌಕರರು

**ಬೆಂಗಳೂರು, ಜು.8–** ತಮ ವಿವಿಧ ಬೇಡಿಕೆಗಳ ಈಡೇರಿಕೆಗೆ ಅಗ್ರಹಿಸಿ ಬಿಬಿಎಂಪಿ ನೌಕರರು ಹಾಗೂ ರಾಜ್ಯದ 10 ಮಹಾನಗರ ಪಾಲಿಕೆಗಳ 25 ಸಾವಿರಕ್ಕೂ ಹೆಚ್ಚು ಸಿಬ್ಬಂದಿಗಳು ಇಂದು ಸಾಮೂಹಿಕ ರಜೆ ಹಾಕಿ ಪ್ರತಿಭಟನೆಯ ಹಾದಿ ಹಿಡಿದಿರುವುದರಿಂದ ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳ ಕಾರ್ಯ ಕಲಾಪಗಳು ಸ್ತಬ್ಧಗೊಂಡಿವೆ.

ಬಿಬಿಎಂಪಿ ಅಧಿಕಾರಿ ಮತ್ತು ನೌಕರರ ಕ್ಷೆಮಾಭಿವೃದ್ಧಿ ಸಂಘ ಹಾಗೂ ಕರ್ನಾಟಕ ರಾಜ್ಯ ಮಹಾನಗರ ಪಾಲಿಕೆ ನೌಕರರ ಸಂಘಗಳ ಪರಿಷತ್ತು ಕರೆ ನೀಡಿರುವ ಈ ಮುಷ್ಕರಕ್ಕೆ ರಾಜ್ಯದಾದ್ಯಂತ ಉತ್ತಮ ಬೆಂಬಲ ವ್ಯಕ್ತವಾಗಿದ್ದು, ಎಲ್ಲಾ ಪಾಲಿಕೆ ಕಚೇರಿಗಳು ಬಿಕೋ ಎನ್ನುತ್ತಿವೆ.

ಮೈಸೂರು, ಮಂಗಳೂರು, ಹುಬ್ಬಳಿ–ಧಾರವಾಡ, ಹುಬ್ಬಳಿ, ದಾವಣಗೆರೆ, ಬೆಳಗಾವಿ ಸೇರಿದಂತೆ ರಾಜ್ಯದಲ್ಲಿರುವ ಎಲ್ಲ ಮಹಾನಗರ ಪಾಲಿಕೆಗಳ ನೌಕರರು ಇಂದು ತಮ ಕೆಲಸ ಕಾರ್ಯ ಸ್ಥಗಿತಗೊಳಿಸಿ ಹೋರಾಟಕ್ಕೆ ಧುಮುಕಿದ್ದಾರೆ. ಅದರಲ್ಲೂ ರಾಜ್ಯದ ನಾನಾ ಮೂಲೆಗಳಿಂದ ರಾಜಧಾನಿಗೆ ಆಗಮಿಸಿರುವ ಸಾವಿರಾರು ನೌಕರರು ಫ್ರಿ?ಡಂ ಪಾರ್ಕ್‌ನಲ್ಲಿ ಜಮಾವಣೆಗೊಂಡು ತಮ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರವನ್ನು ಆಗ್ರಹಿಸಿದ್ದಾರೆ. ನಾವು ಹಲವಾರು ಬಾರಿ ಮನವಿ ಪತ್ರಗಳನ್ನು ನಗರಾಭಿವೃದ್ಧಿ ಸಚಿವರು ಹಾಗೂ ಕಾರ್ಯದರ್ಶಿಗಳಿಗೆ ನೀಡಿದರೂ ನಮಗೆ ಸಕರಾತ್ಮಕ ಪ್ರತಿಕ್ರಿಯೆ ದೊರಕದಿದರುವ ಹಿನ್ನೆಲೆಯಲ್ಲಿ ಸ್ವಾತಂತ್ರ್ಯ ಉದ್ಯಾನವನದಲ್ಲಿ ಎಲ್ಲಾ ಮಹಾನಗರ ಪಾಲಿಕೆಯ ಅಧಿಕಾರಿ ನೌಕರರು ಸಾಮೂಹಿಕ ರಜೆ ಹಾಕಿ ಕೆಲಸ ಕಾರ್ಯಗಳನ್ನು ಸ್ಥಗಿತ ಮಾಡಿ ಬೃಹತ್ ಪ್ರತಿಭಟನೆ ಮಾಡುತ್ತಿದ್ದೇವೆ ಎಂದು ಬಿಬಿಎಂಪಿ ಅಧಿಕಾರಿ ಮತ್ತು ನೌಕರರ ಕ್ಷೆಮಾಭಿವೃದ್ಧಿ ಸಂಘದ ಅಧ್ಯಕ್ಷ ಅಮೃತ್‌ರಾಜ್ ತಿಳಿಸಿದ್ದಾರೆ. ಪಾಲಿಕೆ ನೌಕರರ ಪ್ರಮುಖ ಬೇಡಿಕೆಗಳು: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ, ನೌಕರರು, ಮಾಲಿಗಳು, ಗ್ಯಾಂಗ್‌ಮೆನ್‌ಗಳು ಪಾಲಿಕೆ ಸಿಬ್ಬಂದಿಗಳು ಆಗಿದ್ದು, ಲಾಗ್‌ಸೇಫ್‌ಪದ್ಧತಿಯಲ್ಲಿ ಹಾಜರಾತಿ ಸಲ್ಲಿಸಲು ಕಷ್ಟಕರವಾಗುತ್ತಿರುವುದರಿಂದ ಕೂಡಲೇ ಆ ಪದ್ಧತಿಯನ್ನು ಕೈ ಬಿಡಬೇಕು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ 225 ವಾರ್ಡಗಳಲ್ಲಿ ಖಾಲಿ ಇರುವ ವಿವಿಧ ವೃಂದದ ಸುಮಾರು 6000 ಕ್ಕೂ ಮೇಲ್ಪಟ್ಟು ಖಾಲಿ ಇರುವ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡಬೇಕು. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಿದ್ಯಾ ಇಲಾಖೆಯ ಪ್ರಾಂಶುಪಾಲರು, ಮುಖ್ಯೋಪಾಧ್ಯಯರು ರವರ ಮೇಲೆ ಕ್ಷುಲಕ ಕಾರಣಕ್ಕೆ ಕರ್ತವ್ಯ ಲೋಪದ ಅಡಿಯಲ್ಲಿ ಕಾನೂನು ಬಾಹೀರವಾಗಿ ಇಲಾಖಾ ವಿಚರಣೆ ಜರುಗಿಸುತ್ತಿರುವುದನ್ನು ಕೂಡಲೇ ಕೈ ಬಿಡಬೇಕು. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಕಾರ್ಯಪಾಲಕಅಭಿಯಂತರರ ಹುದ್ದೆಯಿಂದ ಕಾರ್ಯಪಾಲಕ ಅಭಿಯಂತರರ ಹುದ್ದೆಗೆ ಮುಂಬಡ್ತಿ ಹಾಗೂ ಕಾರ್ಯಪಾಲ ಅಭಿಯಂತರರ ಹುದ್ದೆಯಿಂದ ಅಧೀಕ್ಷಕ ಅಭಿಯಂತರರ ಹುದ್ದೆಗೆ ಕೂಡಲೇ ಮುಂಬಡ್ತಿ ನೀಡಲು ಮನವಿ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕಂದಾಯ ಇಲಾಖೆಯಲ್ಲಿ ಖಾತಾ ವರ್ಗಾವಣೆ, ಖಾತಾ ನೋಂದಾವಣೆ, ಖಾತಾ ವಿಭಜನೆ, ಖಾತಾ ಒಂದುಗೂಡಿಸುವುದು ಇ–ಆಸ್ತಿ ಪದ್ಧತಿಯನ್ನು ನಿಯಮಾನುಸಾರ ಈ ಹಿಂದೆ ಇದ್ದ ಪದ್ಧತಿಯಲ್ಲಿಯೇ ಮುಂದುವರೆಸಲು ಆದೇಶಿಸಬೇಕು. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾನೂನು ಬಾಹೀರವಾಗಿ ಎರವಲು ಸೇವೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ ಮತ್ತು ನೌಕರರನ್ನು ಕೂಡಲೇ ಮಾತೃ ಇಲಾಖೆಗೆ ಹಿಂತಿರುಗಿಸಬೇಕು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ವೃಂದದ ಹುದ್ದೆಗಳಿಗೆ ಕೂಡಲೇ ಮುಂಬಡ್ತಿ ನೀಡಬೇಕು.ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ ಮತ್ತು ನೌಕರರ ಸೇವಾ ಜೇಷ್ಠತಾಪಟ್ಟಿಯನ್ನು ಅಂತಿಮಗೊಳಿಸಬೇಕು. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾನೂನು ಬಾಹೀರವಾಗಿ ಕಾರ್ಯನಿರ್ವಹಿಸುತ್ತಿರುವ ಮಾರ್ಷಲ್‌ಗಳ ಹುದ್ದೆಗಳನ್ನು ಈ ಕೂಡಲೇ ರದ್ದುಪಡಿಸಬೇಕು ಎನ್ನುವುದಾಗಿದೆ. ವಿಶೇಷ ಆಯುಕ್ತರ ವಿರುದ್ಧ ನೌಕರರು ಗರಂ; ಪಾಲಿಕೆ ನೌಕರರ ಪ್ರತಿಭಟನೆಗೆ ಹೋಗದಂತೆ ವಿಶೇಷ ಆಯುಕ್ತ ಸುರಳ್ಕರ್ ವಿಕಾಸ್ ಕಿಶೋರ್ ದಮ್ಕಿ ಹಾಕುತ್ತಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ.ತಮ ಕಾರು ಚಾಲಕ ನರಸಿಂಹ ಎಂಬಾತನಿಗೆ ಕರ್ತವ್ಯಕ್ಕೆ ಬರಬೇಕು ಪ್ರತಿಭಟನೆಗೆ ಹೋದರೆ ಶೋಕಸ್ ನೋಟೀಸ್ ನೀಡುವುದಾಗಿ ಸುರಳ್ಕರ್ ಎಚ್ಚರಿಕೆ ನೀಡಿದ್ದರು ಎನ್ನಲಾಗಿದೆ.ಸುರಳ್ಕರ್ ವರ್ತನೆಗೆ ಆಕ್ರೋಶ ವ್ಯಕ್ತಪಡಿಸಿರುವ ನೌಕರರು ಫ್ರಿಡಂ ಪಾರ್ಕ್ ನಿಂದ ಮಲ್ಲೇಶ್ವರಂ ಪಾಲಿಕೆ ಕಚೇರಿಗೆ ನುಗ್ಗಲು ಯತ್ನಿಸದ್ದೇ ಅಲ್ಲದೆ, ಅವರ ವಿರುದ್ಧ ಹರಿಹಾಯ್ದಿದ್ದಾರೆ.




**ಸ್ಪಷ್ಟನೆ;** ಬಿಬಿಎಂಪಿ ಪಶ್ಚಿಮ ವಿಭಾಗದಲ್ಲಿ ಮೂರು ಸಾವಿರ ಮಂದಿ ಸಿಬ್ಬಂದಿ ಇದ್ದಾರೆ. ಅವರ ಪೈಕಿ ಚಾಲಕ ಮತ್ತು ಆಫೀಸ್ ಸಹಾಯಕನಿಗೆ ಮಾತ್ರ ಪ್ರತಿಭಟನೆಗೆ ಹೋಗಬಾರದು ಎಂದು ತಿಳಿಸಿದ್ದೇ. ನಾನು ನೌಕರರ ಪ್ರತಿಭಟನೆಗೆ ಅಡ್ಡಿ ಪಡಿಸುವ ಕಾರ್ಯಕ್ಕೆ ಹೋಗಲ್ಲ. ನಾನು ಕೂಡು ಫ್ರಿಡಂ ಪಾರ್ಕ್‌ಗೆ ತೆರಳುತ್ತೇನೆ ಎಂದು ವಿಶೇಷ ಆಯುಕ್ತ ಸುರಳ್ಕರ್ ಸ್ಪಷ್ಟನೆ ನೀಡಿದ್ದಾರೆ.

**ಸಾವಿರಾರು ಮಂದಿ ಭಾಗಿ;** ಪರಿಷತ್ ಗೌರವಾಧ್ಯಕ್ಷ ಎಸ್ ಹೆಚ್.ಗುರುಮೂರ್ತಿ, ಸಚಿವಾಲಯ ನೌಕರರ ಸಂಘದ ಅಧ್ಯಕ್ಷ ರಮೇಶ್ ಸಂಗಾ,ರಾಜ್ಯ ಉಪಾಧ್ಯಕ್ಷರುಗಳಾದ ಜಿ.ವೆಂಕಟ್ ರಾಮ್, ವೇಣುಗೋಪಾಲ್ ಬಿ.ಎನ್. ಮತ್ತು ಪ್ರಧಾನ ಕಾರ್ಯದರ್ಶಿ ಟಿ.ಸಿ.ಬಸವರಾಜಯ್ಯ, ಖಜಾಂಚಿ ರುದ್ರೇಶ್ ಬಿ ಹಾಗೂ ರಾಜ್ಯ ಕಾರ್ಯದರ್ಶಿ ಪ್ರಹ್ಲಾದ್ ಕುಲಕರ್ಣಿ, ರಾಜ್ಯ ನಿರ್ದೇಶಕರುಗಳಾದ ಸಾಯಿಶಂಕರ್, ಜಗದೀಶ್ ಎಸ್, ಎ.ಜಿ.ಬಾಬು, ಶ್ರೀನಿವಾಸ್ ಕಟ್ಟಿ, ಬಾಬು ಪಿ, ನರಸಿಂಹ ಕೆ, ಶಾಂತಪ್ಪ ಮುಖೇಶಪ್ಪ ಪತ್ತಾರ, ರವೀಂದ್ರ ಶಿರಶ್ಯಾದ ಮತ್ತು ರಾಜ್ಯ ಸರ್ಕಾರಿ ನೌಕರರ ಸಂಘದವರು,10ಮಹಾನಗರ ಪಾಲಿಕೆ ಅಧ್ಯಕ್ಷರು, ಪದಾಧಿಕಾರಿಗಳು ಪ್ರತಿಭಟನೆಯ ನೇತೃತ್ವ ವಹಿಸಿದ್ದರು. ಬಿಬಿಎಂಪಿ ಕಂದಾಯ, ಆರೋಗ್ಯ, ಎಂಜಿನಿಯರ್ ಮತ್ತು ಪೌರ ಕಾರ್ಮಿಕರ ಸಂಘಟನೆಗಳು, ರುದ್ರಭೂಮಿ ನೌಕರರು, ಐ.ಟಿ.ಮತ್ತು ಹೊರಗುತ್ತಿಗೆ ನೌಕರರು, ಆಡಳಿತ ಕಛೇರಿ ಅಧಿಕಾರಿ ಸಿಬ್ಬಂದಿಗಳು ಹಾಗೂ ಹುಬಳ್ಳಿ–ಧಾರವಾಡ, ತುಮಕೂರು, ಮಂಗಳೂರು, ಶಿವಮೊಗ್ಗ, ದಾವಣಗೆರೆ, ಮೈಸೂರು, ವಿಜಯಪುರ ಹಾಗೂ ಕಲಬುರಗಿ, ಬೆಳಗಾಂ, ಬಳ್ಳಾರಿ ಮಹಾನಗರ ಪಾಲಿಕೆ ಅಧಿಕಾರಿ, ನೌಕರರು ಸಿಬ್ಬಂದಿಗಳು ಸೇರಿದಂತೆ ಸಾವಿರಾರು ಮಂದಿ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಮೂವರು ಬೈಕ್ ಕಳ್ಳರ ಬಂಧನ:29 ಬೈಕ್ ವಶ

**ಕಲಬುರಗಿ, ಜು.8–**ಮೋಟರ್ ಸೈಕಲ್ ಗಳನ್ನು ಕಳ್ಳತನ ಮಾಡುತ್ತಿದ್ದ ಮೂವರು ಮೋಟರ್ ಸೈಕಲ್ ಕಳ್ಳರನ್ನು ಬಂಧಿಸಿದ ಚಿಂಚೋಳಿ ಪೊಲೀಸರು 29 ಮೋಟರ್ ಸೈಕಲ್ ಗಳನ್ನು ವಶಪಡಿಸಿಕೊಂಡಿದ್ದಾರೆ ಎಂದು ಎಸ್ಪಿ ಅಡ್ಡೂರು ಶ್ರೀನಿವಾಸಲು ಅವರು ಇಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಶ್ರೀಕಾಂತ ಗಣಪತಿ,( 27) ಬೆನಕಿಪಳ್ಳಿ,ಬಸಯ್ಯ ರಾಚಯ್ಯ ಸ್ವಾಮಿ, (44) ಯಲ್ಮಾಡಿ, ಮತ್ತು ಅಭಿನಂದನ ಜೈಭಾರತ ಮಾನೆ, ಆರ್.ಜಿ.ನಗರ ಕಲಬುರಗಿ ಬಂಧಿತ ಆರೋಪಿಗಳಾಗಿದ್ದು ಬಂಧಿತರಿಂದ 5.41 ಲಕ್ಷ ರೂ ರೂಪಾಯಿ ಮೌಲ್ಯದ ಒಟ್ಟು 29 ಮೋಟಾರ ಸೈಕಲಗಳನ್ನು ವಶಪಡಿಸಿಕೊಳ್ಳಲಾಗಿದೆ.

ಮೋಟಾರ್ ಸೈಕಲ್ ಕಳ್ಳತನ ಪ್ರಕರಣ ಪತ್ತೆ ಹಚ್ಚಲು ಕಳ್ಳತನ ಪ್ರಕರಣದ ಪತ್ತೆ ಕುರಿತು ಅಪರ ಪೊಲೀಸ ಅಧೀಕ್ಷಕ ಮಹೇಶ ಮೇಘಣ್ಣನವರ ಮತ್ತು ಉಪ–ಅಧೀಕ್ಷಕ ಸಂಗಮನಾಥ ಹಿರೇಮಠ, ಚಿಂಚೋಳಿ ಸಿಪಿಐ ಕಪೀಲದೇವ ಮಾರ್ಗದರ್ಶನದಲ್ಲಿ ಚಿಂಚೋಳಿ ಠಾಣೆ ಪಿಎಸ್ಐ ಗಂಗಮ್ಮಾ ನೇತೃತ್ವದಲ್ಲಿ ಸಿಬ್ಬಂದಿಯವರಾದ, ರಾಜು, ಅಶೋಕ, ಓಂಕಾರ, ರಮೇಶ,ಯಮನೂರಪ್ಪ, ನಾಗೇಶ, ಅಮೀರ ಅಲಿ, ಮಾಳಪ್ಪ ಅವರನ್ನೊಳಗೊಂಡಂತೆ ತಂಡ ರಚಿಸಲಾಗಿತ್ತು ಎಂದು ಎಸ್ಪಿ ಅವರು ವಿವರಿಸಿದರು.

ಚಿಂಚೋಳಿ ಪಿಎಸ್ ಐ ಗಂಗಮ್ಮಾ ಅವರು ಜೂನ್ 19 ರಂದು ಚಿಮ್ಮನಚೂಡ ಉಕ್ಕಡ ಪೊಲೀಸ್ ಠಾಣೆಯಲ್ಲಿರುವಾಗ ಬೆನಕಿಪಳ್ಳಿ ಗ್ರಾಮದ ಹತ್ತಿರ ಇರುವ ಬೀಡ್ಜ್ ಮೇಲೆ ಯಾರೋ ಒಬ್ಬ ವ್ಯಕ್ತಿಯು 3 ಮೊಟಾರ ಸೈಕಲಗಳನ್ನು ತಂದು ಕಡಿಮೆ ಬೆಲೆಯಲ್ಲಿ ಮಾರಾಟ ಮಾಡುತ್ತಿದ್ದಾನೆ ಮತ್ತು ಮೊಟಾರ ಸೈಕಲಗಳ ಕಾಗದ ಪತ್ರ ನಂತರ ನೀಡುವುದಾಗಿ ಹೇಳುತ್ತಿದ್ದಾನೆ, ಮೋಟಾರ ಸೈಕಲಗಳು ಕಳ್ಳತನ ಮಾಡಿದ ಮೋಟಾರ ಸೈಕಲಗಳಾಗಿರುತ್ತವೆ ಅಂತಾ ಖಚಿತ ಬಾತ್ಮಿ ಮೇರೆಗೆ ಸಿಬ್ಬಂದಿಯೊಂದಿಗೆ ಹೋಗಿ ಹಿಡಿದು ಅವನ ಹೆಸರು ವಿಚಾರಿಸಲಾಗಿ ಶ್ರೀಕಾಂತ ಗಣಪತಿ ಭೂತಾಳೆ ಅಂತಾ ಹೇಳಿದನು. ಮೋಟಾರ ಸೈಕಲಗಳ ದಾಖಲಾತಿಗಳ ಬಗ್ಗೆ ವಿಚಾರಿಸಲಾಗಿ ಯಾವುದೇ ದಾಖಲಾತಿಗಳು ಹಾಜರುಪಡಿಸಿರುವುದಿಲ್ಲ. ಮತ್ತೆ ಮರು ಪ್ರಶ್ನೆ ಮಾಡಿದಾಗ ಆತನ ಗೆಳೆಯನಾದ ಬಸಯ್ಯಸ್ವಾಮಿ ಇತನು ಕಳ್ಳತನ ಮಾಡಿದ ಮೋಟಾರ ಸೈಕಲಗಳನ್ನು ಮಾರಾಟ ಮಾಡಲು ಹೇಳಿದ್ದರಿಂದ ಈ ಸೈಕಲಗಳನ್ನು ಇಲ್ಲಿಗೆ ತಂದು ಮಾರಾಟ ಮಾಡುತ್ತಿದ್ದೇನೆ ಎಂದು ಹೇಳಿದನು. ನಂತರ ಪಂಚರ ಸಮಕ್ಷಮ ಜಪ್ತಿ ಪಡಿಸಿಕೊಂಡುಪ್ರಕರಣ ದಾಖಲಿಸಿಕೊಂಡು ಕ್ರಮ ಕೈಗೊಳ್ಳಲಾಯಿತು .ನಂತರ ಪ್ರಕರಣ ಪತ್ತೆಗೆ ತಂಡ ರಚಿಸಲಾಯಿತು ಎಂದು ವಿವರಿಸಿದರು.

# ಅಂಚೆ ಜೀವ ವಿಮೆ ಉತ್ಪನ್ನಗಳ ಮಾರಾಟಕ್ಕೆ ಅರ್ಜಿ ಆಹ್ವಾನ

**ರಾಯಚೂರು,ಜು.8–** ಇಲ್ಲಿನ ರಾಯಚೂರು ವಿಭಾಗದಲ್ಲಿ ಅಂಚೆ ಜೀವ ವಿಮೆ ಹಾಗೂ ಗ್ರಾಮೀಣ ಅಂಚೆ ಜೀವ ವಿಮೆ ಉತ್ಪನ್ನಗಳನ್ನು ಮಾರಾಟ ಮಾಡಲು ನೇರ ಪ್ರತಿನಿಧಿಗಳ ನಿಯುಕ್ತಿಗಾಗಿ ಪ್ರಸ್ತಾವಿಸಿದ್ದು, ಆಸಕ್ತ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು 10ನೇ ತರಗತಿ ಉತ್ತೀರ್ಣರಾಗಿರುವುದು ಕಡ್ಡಾಯ. ವಯೋಮಿತಿ 18 ರಿಂದ 50 ವರ್ಷಗಳು. ನಿರುದ್ಯೋಗಿ ಹಾಗೂ ಸ್ವಯಂ ಉದ್ಯೋಗನಿರತ ಯುವಕರು, ವಿಮಾ ಕಂಪನಿಗಳ ಮಾಜಿ ಏಜೆಂಟರು ಹಾಗೂ ಸಲಹೆಗಾರರು, ಮಾಜಿ ಸೈನಿಕರು, ಅಂಗನವಾಡಿ ಕಾರ್ಯಕರ್ತೆಯರು, ಮಹಿಳಾ ಮಂಡಳದ ಕಾರ್ಯಕರ್ತೆಯರು, ನಿವೃತ್ತ ಪ್ರಧಾನ ಮತ್ತು ಗ್ರಾಮ ಪಂಚಾಯತಿಯ ಸದಸ್ಯರು ಹಾಗೂ ಅಂಚೆ ವಿಭಾಗದ ಮುಖ್ಯಸ್ಥರಿಗೆ ಸಮಂಜಸವೆಂದು ಕಂಡುಬಂದ ಯಾವುದೇ ಅಭ್ಯರ್ಥಿಗಳು ಆಯ್ಕೆಯಾದ ಪಕ್ಷದಲ್ಲಿ ಅವಕಾಶ ನೀಡಲಾಗುವುದು. ನುರಿತ, ಸಂವಹನ ಕಲೆ ಹಾಗೂ ವಿಮಾ ಮಾರಾಟ ಕ್ಷೇತ್ರದಲ್ಲಿ ಪೂರ್ವಾನುಭವ ಹೊಂದಿರುವವರಿಗೆ ಆದ್ಯತೆ ನೀಡಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳು 5000 ರೂ.ಗಳನ್ನು ರಾಷ್ಟ್ರೀಯ ಉಳಿತಾಯ ಪತ್ರ ಅಥವಾ ಕಿಸಾನ ವಿಕಾಸ ಪತ್ರದ ರೂಪದಲ್ಲಿ ಭದ್ರತಾ ಠೇವಣಿ ಇಡಬೇಕಾಗುತ್ತದೆ. ಆಯ್ಕೆಯಾದ ನೇರ ಪ್ರತಿನಿಧಿಗಳಿಗೆ ಅವರು ಮಾಡಿದ ವ್ಯವಹಾರಕ್ಕೆ ತಕ್ಕಂತೆ ಸೂಕ್ತ ಕಮೀಶನ್ ನೀಡಲಾಗುವುದು. ಆಸಕ್ತರು ತಮ್ಮ ಇತ್ತೀಚಿನ ಭಾವಚಿತ್ರದೊಂದಿಗೆ ಸ್ವವಿವರ, ಶೈಕ್ಷಣಿಕ ಪ್ರಮಾಣ ಪತ್ರದ ನಕಲುಗಳೊಂದಿಗೆ ಜುಲೈ 18ರ ಬೆಳಿಗ್ಗೆ 11 ಗಂಟೆಗೆ ಗಂಜ್ ವೃತ್ತದ ಬಳಿಯಿರುವ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ನಡೆಯಲಿರುವ ನೇರ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಅಂಚೆ ಕಚೇರಿಯನ್ನು ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸುಂಕೇಶ್ವರಹಾಳ ಗ್ರಾಮದಲ್ಲಿ ಹಿಂದೂ ಮುಸ್ಲಿಂ ಭಾವೈಕ್ಯತೆ ಸಂಕೇತವಾದ ಮೊಹರಂ ಹಬ್ಬ ಆಚರಣೆ

**ದೇವದುರ್ಗ,ಜು.8–** ದೇವದುರ್ಗ ತಾಲೂಕಿನ ಸುಂಕೇಶ್ವರಹಾಳ ಗ್ರಾಮದಲ್ಲಿ ತ್ಯಾಗ ಮತ್ತು ಬಲಿದಾನದ ಪ್ರತೀಕವಾದ ಹಿಂದೂ ಮುಸ್ಲಿಂ ಭಾವೈಕ್ಯತೆಯ ಸಂಕೇತವಾದ, ಜಾತಿ ಮತ ಪಂಥ ಬೇಧವಿಲ್ಲದೆ ನಾವೆಲ್ಲರೂ ಒಂದೇ ಎನ್ನುವ ಮನೋಭಾವನೆಯನ್ನು ಹೊಂದಿರುವ ಮೊಹರಂ ಹಬ್ಬವನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಯಿತು.ಜೂಲೈ 3 ರಂದು ಗುರುವಾರ ರಾತ್ರಿ ಹಜರತ್ ಇಮಾಮ್ ಖಾಸಿಂ ಸಾಬ್ ಸವಾರಿ ಅತ್ಯಂತ ಸಡಗರ ಸಂಭ್ರಮದಿಂದ ಜರುಗಿತು. ಹಜರತ್ ಇಮಾಮ್ ಖಾಸಿಂ ಸಾಬ್ ದೇವರನ್ನು ಹನುಮಂತ ಪೂಜಾರಿ ದೇವರನ್ನು ಹಿಡಿದರು.ಗುರುವಾರ ಸಾಯಂಕಾಲ ಸನಾಯ, ಹಲಗೆ ಗಳೊಂದಿ ಸಾಯಂಕಾಲ ಊರಿನ ದೇವರ ಭಾವಿ ಹತ್ತಿರ ಇರುವ ಹಜರತ್ ಗೋಕುಲ್ ಸಾಬ್ ದರ್ಗಾಕ್ಕೆ ಊರಿನ ಗುರು ಹಿರಿಯರು, ಎಲ್ಲಾರೂ ಸೇರಿಕೊಂಡು ಹೋಗಿ ಪೂಜೆ ಮಾಡಿಸಿದರು.ರಾತ್ರಿ ಎಲ್ಲಾ ಯುವಕರು ಅಲಾಯ ಹೆಜ್ಜೇಗಳನ್ನು ಕುಣಿದರು.

ಜು.5 ರಂದು ಶನಿವಾರದಂದು ಅತ್ಯಂತ ವಿಜೃಂಭಣೆಯಿಂದ ಕತಲ ರಾತ್ರಿ (ಗಂಧರಾತ್ರಿ) ಆಚರಿಸಲಾಯಿತು.ಮೊಹರಂ ಕೊನೆಯ ದಿನವಾದ ರವಿವಾರ ಸಂಜೆ ದಫನ್ ಕಾರ್ಯಕ್ಕೆ ಆಲಂ ದೇವರುಗಳು ಅಪಾರ ಜನಗಳ ಮದ್ಯೆ ಅತ್ಯಂತ ಅದ್ದೂರಿಯಾಗಿ ಮೆರವಣಿಗೆ ಮೂಲಕ ತೆರೆ ಎಳೆಯಲಾಯಿತು.ಮೊಹರಂ ಹಬ್ಬವನ್ನು ವೀಕ್ಷಿಸಲು ಗ್ರಾಮದ ಸಹಸ್ರ ಸಂಖ್ಯೆಯಲ್ಲಿ ಗುರು ಹಿರಿಯರು,ಪುರುಷರು,ಮಹಿಳೆಯರು,ಯುವಕರು ಹಾಗೂ ಚಿಕ್ಕ



ಮಕ್ಕಳು ಹೊಸ ಹೊಸ ಬಟ್ಟೆಗಳನ್ನು ಹಾಕಿಕೊಂಡು ಆಗಮಿಸಿ ಆಲಂ ದೇವರುಗಳ ಕೃಪೆಗೆ ಪಾತ್ರರಾದರು.

ಈ ಮೊಹರಂ ಹಬ್ಬದ ಕಾರ್ಯಕ್ರಮದಲ್ಲಿ ಗ್ರಾಮದ ಗುರು ಹಿರಿಯರು,ಊರಿನ ಪ್ರಮುಖ ಮುಖಂಡರು, ಗ್ರಾ.ಪಂ. ಅಧ್ಯಕ್ಷರು, ಸದಸ್ಯರು,ಯುವಕರ ಬಳಗದವರು,ಹಿಂದೂ ಮುಸ್ಲಿಂ ಭಾವೈಕ್ಯತೆಯ ನಾವೇಲ್ಲಾರು ಒಂದೇ ಎಂದು ಹಬ್ಬವನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಿದರು.ಈ ಸಂದರ್ಭದಲ್ಲಿ ಶ್ರೀ ಬಸನಗೌಡ ಪಾಟೀಲ್,ಮುದುಕಪ್ಪ ನಾಯಕ,ಹನುಮಂತ ಪೂಜಾರಿ, ಕರೆಪ್ಪ ಪೂಜಾರಿ, ಅಶೋಕ ಮುಂತಾದ ಗಣ್ಯ ವ್ಯಕ್ತಿಗಳು ಇದ್ದರೂ. ಮುಂತಾದ ಊರಿನ ಹಿರಿಯರು,ಕಿರಿಯರು ಭಾಗವಹಿಸಿದ್ದರು.

# ಜಲ ಜೀವನ ಮಿಷನ್ ಯೋಜನೆ ತ್ವರಿತವಾಗಿ ಪೂರ್ಣಗೊಳಿಸಿ: ರಾಹುಲ್



**ಯುವ ಮಾರ್ಗ ಸುದ್ದಿ**

**ರಾಯಚೂರು,ಜು.8–** ಪ್ರತಿ ಮನೆಗೂ ನಳ ಸಂಪರ್ಕದ ಮೂಲಕ ಶುದ್ಧ ಕುಡಿಯುವ ನೀರು ಪೂರೈಸುವ ಜಲ ಜೀವನ ಮಿಷನ್ ಯೋಜನೆ ಅನುಷ್ಠಾನ ಕಾರ್ಯವನ್ನು ಜಿಲ್ಲೆಯಲ್ಲಿ ತ್ವರಿತವಾಗಿ ಪೂರ್ಣಗೊಳಿಸಬೇಕು ಹಾಗೂ ಕಾಮಗಾರಿಯಲ್ಲಿ ಗುಣಮಟ್ಟ ಕಾಯ್ದುಕೊಳ್ಳುವಂತೆ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯ ನಿರ್ವಾಹಕ ಅಧಿಕಾರಿ ರಾಹುಲ್ ತುಕಾರಾಂ ಪಾಂಡ್ವೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಸೋಮವಾರ ದಂದು ನಗರದ ಜಿಲ್ಲಾ ಪಂಚಾಯಿತಿಯ ಜಲ ನಿರ್ಮಲ ಸಭಾಂಗಣದಲ್ಲಿ ಜಲ ಜೀವನ ಮಿಷನ್ ಯೋಜನೆ ಕಾಮಗಾರಿಗಳ ಸಮಗ್ರ ಅನುಷ್ಠಾನಕ್ಕಾಗಿ ಜಿಲ್ಲಾ ನೀರು ಮತ್ತು ನೈರ್ಮಲ್ಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಕೈಗೊಂಡಿರುವ ಜಲಜೀವನ್ ಮಿಷನ್ ಯೋಜನೆಯ ಕಾಮಗಾರಿಯು ಗುಣಮಟ್ಟದಿಂದ ಕೂಡಿರಬೇಕು. ಸಂಬಂಧಪಟ್ಟ ಅಧಿಕಾರಿಗಳು ಖುದ್ದಾಗಿ ಕಾಲಕಾಲಕ್ಕೆ ಸ್ಥಳ ಪರಿಶೀಲನೆ ಮಾಡಬೇಕು. ಜಲಜೀವನ್ ಮಿಷನ್ ಯೋಜನೆಯಡಿ ಜಿಲ್ಲೆಗೆ ಸುಮಾರು 84141.25 ಲಕ್ಷ ರೂ. ಅನುದಾನ ಮಂಜೂರಾಗಿದ್ದು, ಸರ್ಕಾರದ ಅನುದಾನ ಸದ್ಬಳಕೆ ಮಾಡಿಕೊಳ್ಳಬೇಕು. ಕೆಲಸ ಸರಿಯಾಗಿ ಮಾಡಬೇಕೆಂದು ಸಂಬಂಧಿಸಿದ ಗುತ್ತಿಗೆದಾರರಿಗೆ ಸೂಚನೆ ನೀಡಬೇಕೆಂದರು.

ಜಲಜೀವನ್ ಮಿಷನ್ ಯೋಜನೆಯಡಿ ಜಿಲ್ಲೆಯ 5 ತಾಲೂಕಿನಲ್ಲಿ ಬ್ಯಾಚ್ 1, 2, 3 ಮತ್ತು 4 ರಲ್ಲಿ ಒಟ್ಟು 1223 ಕಾಮಗಾರಿಗಳನ್ನು ಕೈಗೊಂಡಿದ್ದು, ಇದರಲ್ಲಿ 832 ಕಾಮಗಾರಿಗಳು ಪೂರ್ಣಗೊಂಡಿದ್ದು, 387 ಕಾಮಗಾರಿಗಳು ಪ್ರಗತಿಯಲ್ಲಿದ್ದು, ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯ ಎಲ್ಲಾ ಶಾಲೆಗಳು ಮತ್ತು ಅಂಗನಾಡಿಗಳಿಗೆ ಜಲ ಜೀವನ್ ಮಿಷನ್ ಯೋಜನೆಯನ್ನು ಅನುಷ್ಠಾನಗೊ ಳಿಸಬೇಕು. ಯಾದ–ಯಾವ ಶಾಲೆಗಳಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗಿದೆ. ಅವನ್ನು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಮಹಜರು ಮಾಡಿ ವರದಿ ನೀಡಬೇಕು. ಅಂಗನವಾಡಿಗಳಲ್ಲಿ ಬಳಸಲಾಗುವ ನೀರನ್ನು ಸುಯಾಗಿದೆಯೇ ಇಲ್ಲವೇ ಎಂಬುವುದನ್ನು ಆರೋಗನಿ ಇಲಾಖೆಯಿಂದ ಪರೀಕ್ಷೆ ನಡೆಸಬೇಕು. ಮುಖ್ಯವಾಗಿ ಕುಡಿಯುವ ನೀರು ಹಾಗೂ ಆಡುಗೆಗೆ ಬಳಸುವ ನೀರನ್ನು ಸರಿಯಾಗಿ ಪರೀಕ್ಷೆ ಮಾಡಲೇಬೇಕು ಎಂದು ತಿಳಿಸಿದರು.

ಪ್ರತಿ ದಿನವೂ ಆರೋಗ್ಯ ಇಲಾಖೆಯಿಂದ ನೀರಿನ ಪರೀಕ್ಷಾ ವರದಿಯನ್ನು ಪಡೆಯಲಾಗುತ್ತಿದೆ. ಆಯಾ ಗ್ರಾಮಗಳ ನೀರಿನ ಗುಣಮಟ್ಟದ ಪರೀಕ್ಷೆಯನ್ನು ಆಯಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಂದ ಪಡೆಯಲಾಗುತ್ತದೆ. ಜೊತೆಗೆ ಡೆಂಗ್ಯೂ ಮಾಹಿತಿಯನ್ನೂ ಪಡೆಯಲಾಗುತ್ತಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಅಭಿಯಂತರರಾದ ನಾಗೇಶ್, ಸಾರ್ವಜನಿಕ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಡಿ.ಬಡಿಗೇರ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ಗಣೇಶ್, ಜಿಲ್ಲಾ ಗಿರಿಜನ ಕಲ್ಯಾಣಾಧಿಕಾರಿ ಮಲ್ಲಯ್ಯ ಕೆ., ರಾಯಚೂರು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರಾದ ಪುಷ್ಪಲತಾ ಇದ್ದರು.

# ಪ್ರೀ, ಪೋಸ್ಟ್ ಮೆಟ್ರಿಕ್ ವಿದ್ಯಾರ್ಥಿಗಳಿಂದ ವಿದ್ಯಾರ್ಥಿ ವೇತನಕ್ಕೆ ಅರ್ಜಿ

**ರಾಯಚೂರು,ಜು.8–**ಇಲ್ಲಿನ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಿಂದ 2025–26 ನೇ ಸಾಲಿಗೆ ಎಸ್ಎಸ್ಪಿ ತಂತ್ರಾಂಶದ ಮುಖಾಂತರ ಪ್ರೀ–ಮೆಟ್ರಿಕ್ ಹಾಗೂ ಪೋಸ್ಟ್ ಮೆಟ್ರಿಕ್ ವಿದ್ಯಾರ್ಥಿ ವೇತನಕ್ಕೆ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ರಾಜ್ಯ ಎಸ್.ಎಸ್.ಪಿ. ವಿದ್ಯಾರ್ಥಿ ವೇತನ ಯೋಜನೆಯಡಿಯಲ್ಲಿ ಜಿಲ್ಲಾ ವ್ಯಾಪ್ತಿಯ ಶಾಲೆಗಳಲ್ಲಿ, ಕಾಲೇಜುಗಳಲ್ಲಿ, ಪದವಿ ಹಾಗೂ ವಿಶ್ವವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಆಜಾದ ನಗರ, ರಾಯಚೂರು ಅವರ ವಿಕಲಚೇತನರ ಸಹಾಯವಾಣಿ ಕೇಂದ್ರದ ದೂರವಾಣಿ ಸಂಖ್ಯೆ: 08532–200992ಗೆ ಅಥವಾ ಆಯಾ ತಾಲ್ಲೂಕಿನ ಗ್ರಾಮೀಣ ಮಟ್ಟದಲ್ಲಿ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಹಾಗೂ ನಗರ ಪ್ರದೇಶದಲ್ಲಿ ನಗರ ಪುನರ್ವಸತಿ ಕಾರ್ಯಕರ್ತರು ಹಾಗೂ ತಾಲ್ಲೂಕು ಮಟ್ಟದಲ್ಲಿ ವಿವಿದೋದ್ದೇಶ ಪುನರ್ವಸತಿ ಕಾ ರ್ಯಕರ್ತರನ್ನು ಸಂಪರ್ಕಿಸುವಂತೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ ಇಂಟರ್ನಶಿಪ್‌ಗೆ ಅವಕಾಶ

**ರಾಯಚೂರು,ಜು.8–**ಕರ್ನಾಟಕ ಮಾಧ್ಯಮ ಅಕಾಡೆಮಿಯು ಮಹಿಳಾ ಆಯವ್ಯಯ ಹಾಗೂ ಪರಿಶಿಷ್ಟ ಜಾತಿ ಉಪ ಯೋಜನೆ ಮತ್ತು ಪರಿಶಿಷ್ಟ ಪಂಗಡ ಉಪ ಯೋಜನೆಗಳಡಿ ಪತ್ರಿಕೋದ್ಯಮದಲ್ಲಿ ಆಸಕ್ತಿ ಇರುವ ಸ್ನಾತಕೋತ್ತರ ಪದವೀಧರರಿಗೆ ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ ಇಂಟರ್ನಶಿಪ್‌ಗೆ ಅವಕಾಶ ಕಲ್ಪಿಸಿದೆ. ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಪದವಿ ಪಡೆದವರಿಗೆ ಆದ್ಯತೆ ನೀಡಲಾಗುವುದು.

ಬರವಣಿಗೆಯಲ್ಲಿ ಪರಿಣತಿ ಹೊಂದಿರುವ, ಪತ್ರಿಕೋದ್ಯಮದಲ್ಲಿ ಆಸಕ್ತಿ ಇರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. 2022–23 ಹಾಗೂ 2023–24ನೇ ಶೈಕ್ಷಣಿಕ ವರ್ಷದಲ್ಲಿ ಯಾವುದೇ ವಿಷಯದಲ್ಲಿ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಸ್ನಾತಕೋತ್ತರ ಪದವಿ ಪಡೆದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಪ್ರವೇಶ ಪರೀಕ್ಷೆಯ ಮೂಲಕ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು ಎಂದು ಅಕಾಡೆಮಿ ಅಧ್ಯಕ್ಷೆ ಆಯೇಶಾ ಖಾನಂ ತಿಳಿಸಿದ್ದಾರೆ. ಮಹಿಳಾ ಆಯವ್ಯಯದಡಿ 10 ಮಹಿಳೆಯರು, ಪರಿಶಿಷ್ಟ ಜಾತಿ ಉಪಯೋಜನೆಯಡಿ 10 ಪರಿಶಿಷ್ಟ ಜಾತಿಯ ಅಭ್ಯರ್ಥಿಗಳು ಹಾಗೂ ಪರಿಶಿಷ್ಟ ಪಂಗಡ ಉಪ ಯೋಜನೆಯಡಿ 4 ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಸೇರಿ ಒಟ್ಟು 24 ಅಭ್ಯರ್ಥಿಗಳಿಗೆ ಇಂಟರ್ನಶಿಪ್‌ಗೆ ಅವಕಾಶ ಒದಗಿಸಲಾಗುತ್ತದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ ಎರಡು ತಂಡಗಳಲ್ಲಿ ಎರಡು ತಿಂಗಳ ಇಂಟರ್ನಶಿಪ್‌ಗೆ ಅವಕಾಶ ಕಲ್ಪಿಸಲಾಗುವುದು. ಇಂಟರ್ನಶಿಪ್‌ಗೆ ಸಂಸ್ಥೆ ಹಾಗೂ ಸ್ಥಳವನ್ನು ಅಕಾಡೆಮಿಯೇ ನಿಗದಿಪಡಿಸುತ್ತದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ಅಕಾಡೆಮಿಯಿಂದ ಮಾಸಿಕ 20,000 ರೂ. ಸ್ಟೈಪೆಂಡ್ ನೀಡಲಾಗುವುದು.

ಅಭ್ಯರ್ಥಿಗಳು ತಮ್ಮ ಸ್ವವಿವರ (Curriculum Vitae) ದೊಂದಿಗೆ ನಿಗದಿತ ಅರ್ಜಿ ನಮೂನೆಯನ್ನು ಭರ್ತಿ ಮಾಡಿ ಪೂರಕ ದಾಖಲೆಗಳೊಂದಿಗೆ ಗೂಗಲ್ ಫಾರ್ಮ್ https://forms.gle/UgNqDcFs1v6akyAD9 ರಲ್ಲಿ ಅರ್ಜಿ ಸಲ್ಲಿಸುವುದು. ಅಭ್ಯರ್ಥಿಗಳ ಆಯ್ಕೆಯ ಅಂತಿಮ ತೀರ್ಮಾನ ಅಕಾಡೆಮಿಯ ಸಮಿತಿಯದ್ದೇ ಅಗಿರುತ್ತದೆ.

ಅರ್ಜಿ ಸಲ್ಲಿಸಲು 2025ರ ಜುಲೈ 25 ಕೊನೆಯ ದಿನವಾಗಿದೆ. ತಡವಾಗಿ ಬಂದ ಅರ್ಜಿಗಳನ್ನು ಪರಿಗಣಿಸುವುದಿಲ್ಲ ಎಂದು ಮಾಧ್ಯಮ ಅಕಾಡೆಮಿಯ ಕಾರ್ಯದರ್ಶಿ ಸಹನಾ ಎಂ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೀದಿನಾಟಕ, ಜಾನಪದ ಸಂಗೀತ ಕಲಾ ತಂಡಗಳಿಂದ ಅರ್ಜಿ ಆಹ್ವಾನ

**ರಾಯಚೂರು ಜುಲೈ 08–** ರಾಯಚೂರಿನ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಸರ್ಕಾರದ ಯೋಜನೆಗಳು, ಸಾಧನೆಗಳ ಕುರಿತು ಬೀದಿ ನಾಟಕ, ಜಾನಪದ ಸಂಗೀತ ಕಾರ್ಯಕ್ರಮಗಳ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಉದ್ದೇಶಿಸಲಾಗಿದ್ದು, ಇದಕ್ಕಾಗಿ ಬೀದಿನಾಟಕ, ಜಾನಪದ ಸಂಗೀತ ಕಲಾ ತಂಡಗಳನ್ನು ಆಯ್ಕೆ ಮಾಡಿಕೊಳ್ಳುವ ಸಂಬಂಧ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಜುಲೈ 24 ಕೊನೆಯ ದಿನವಾಗಿದೆ.

ರಾಯಚೂರು ಜಿಲ್ಲೆಯಿಂದ 3 ಬೀದಿನಾಟಕ ಹಾಗೂ 3 ಜಾನಪದ ಸಂಗೀತ ಕಲಾ ತಂಡಗಳನ್ನು ಆಯ್ಕೆ ಮಾಡಿಕೊಳ್ಳಲಾಗುವುದು. ಪ್ರತಿ ಬೀದಿನಾಟಕ ತಂಡದಲ್ಲಿ 8 ಜನ ಕಲಾವಿದರಿದ್ದು, ಅದರಲ್ಲಿ ಕಡ್ಡಾಯವಾಗಿ ಇಬ್ಬರು ಮಹಿಳೆಯರು ಹಾಗೂ ಒಬ್ಬರು ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಕ್ಕೆ ಸೇರಿದ ಕಲಾವಿದರಿರಬೇಕು. ಪ್ರತಿ ಜಾನಪದ ಸಂಗೀತ ಕಲಾ ತಂಡದಲ್ಲಿ 3 ಜನ ಕಲಾವಿದರಿದ್ದು, ಅದರಲ್ಲಿ ಕಡ್ಡಾಯವಾಗಿ ಒಬ್ಬರು ಮಹಿಳೆಯರು ಹಾಗೂ ಒಬ್ಬರು ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಕ್ಕೆ ಸೇರಿದ ಕಲಾವಿದರಿರಬೇಕು. ಈ ಹಿಂದೆ ವಿವಿಧ ಇಲಾಖೆಗಳ ಜಾಗೃತಿ ಕಾರ್ಯಕ್ರಮಗಳನ್ನು ಮಾಡಿರುವ ಅನುಭವ ಹೊಂದಿರಬೇಕು. ಬೀದಿನಾಟಕ ತಂಡವು ನೋಂದಾಯಿತ ತಂಡವಾಗಿರಬೇಕು. ನಿಗದಿತ ಅರ್ಜಿ ನಮೂನೆಯನ್ನು ಹಿರಿಯ ಸಹಾಯಕ ನಿರ್ದೇಶಕರ ಕಚೇರಿ, 1ನೇ ಮಹಡಿ, ಪತ್ರಿಕಾಭವನ, ರಂಗಮಂದಿರ ಹಿಂಭಾಗ, ರಾಯಚೂರು ಇವರಿಂದ ಉಚಿತವಾಗಿ ಪಡೆದು ಭರ್ತಿ ಮಾಡಿದ ಅರ್ಜಿಯೊಂದಿಗೆ ಅಗತ್ಯ ದಾಖಲಾತಿಗಳನ್ನು ಲಗತ್ತಿಸಿ ಜುಲೈ 24ರ ಒಳಗಾಗಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಈ ಕಚೇರಿಯ ಲಿಂಗರಾಜ್ ಮೊಬೈಲ್ ಸಂಖ್ಯೆ: 9743892080, ಎ.ಪ್ರಕಾಶ್ ಮೊಬೈಲ್ ಸಂಖ್ಯೆ: 9035063156ಗೆ ಸಂಪರ್ಕ ಮಾಡಬಹುದಾಗಿದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಸುಲೈಮಾನ್ ನದಾಫ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಂಥಾಲಯದ ಸೇವೆ ತಾತ್ಕಾಲಿಕವಾಗಿ ಸ್ಥಗಿತ

**ರಾಯಚೂರು,ಜು.8–**ಇಲ್ಲಿನ ಸ್ಟೇಷನ್ ರೋಡ್, ನಗರ ಉದ್ಯಾನವನ ಪಕ್ಕದ ನಗರ ಕೇಂದ್ರ ಗ್ರಂಥಾಲಯ ಕಟ್ಟಡವನ್ನು ಜುಲೈ 07 ರಿಂದ ಆಧುನೀಕರಣ, ನವೀಕರಣ ಕಾರ್ಯಕೈಗೊಂಡ ಪ್ರಯುಕ್ತ ಗ್ರಂಥಾಲಯದ ಸೇವೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ ಎಂದು ನಗರ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯಾಧಿಕಾರಿ ನಿರ್ಮಲಾ ಹೆಚ್ ಹೊಸೂರು ಅವರು ತಿಳಿಸಿದ್ದಾರೆ.

ಇತ್ತೀಚೆಗೆ ರಾಯಚೂರು ಸಹಾಯಕ ಆಯುಕ್ತರು ಗ್ರಂಥಾಲಯಕ್ಕೆ ಭೇಟಿ ನೀಡಿ ಮೌಖಿಕ ಆದೇಶದ ಮೇರೆಗೆ ಗ್ರಂಥಾಲಯವನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. ಈ ಸೇವೆಯನ್ನು ಜಿಲ್ಲಾ ಕೇಂದ್ರ ಗ್ರಂಥಾಲಯ ಹಾಗೂ ರಾಯಚೂರು ನಗರದಲ್ಲಿ ಇರುವ ಶಾಖಾ

ಗ್ರಂಥಾಲಯದಲ್ಲಿ ಸೇವೆಯನ್ನು ಪಡೆದುಕೊಳ್ಳುವಂತೆ ನಗರ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜು.12 ರಂದು ತಾಡತೆಗನೂರ ಗ್ರಾಮದಲ್ಲಿ ಪುರಾಣ ಮಹಾಮಂಗಳ

**ಕಲಬುರಗಿ,ಜು.8–** ತಾಲೂಕಿನ ತಾಡತೆಗನೂರ ಗ್ರಾಮದಲ್ಲಿ ಮಹಾಲಕ್ಷ್ಮೀದೇವಿಯ 3 ನೇ ವರ್ಷದ ಜಾತ್ರಾ ಮಹೋತ್ಸವದ ಅಂಗವಾಗಿ ಜುಲೈ 2 ರಿಂದ ಪ್ರಾರಂಭಗೊಂಡ ಮಹಾನ್ ತತ್ವಜ್ಞಾನಿ ಕಡಕೋಳ ಮಡಿವಾಳೇಶ್ವರ ಪುರಾಣ ಜುಲೈ 12 ರವರೆಗೆ ನಡೆಯಲಿದೆ. ಚಿನ್ಮಯಗಿರಿಯ ಮಹಾತಪಸ್ವಿ ಶ್ರೀ ಗುರು ಮಹಾಂತೇಶ್ವರ ಮಠದ ನೂತನ ಪೀಠಾಧಿಪತಿ ವೀರಮಹಾಂತೇಶ್ವರ ಶಿವಾಚಾರ್ಯರ ನೇತೃತ್ವದಲ್ಲಿ ಕಾರ್ಯಕ್ರಮ ನಡೆಯಲಿದೆ. ಪ್ರತಿದಿನ ರಾತ್ರಿ 7 ರಿಂದ 11 ಗಂಟೆವರೆಗೆ ವೇ.ಶಿವಲಿಂಗಯ್ಯಶಾಸ್ತ್ರೀಗಳು ಗರೂರ ( ಬಿ) ಅವರು ಪ್ರಸ್ತುತ ಪಡಿಸುವ ಪುರಾಣ ಕಾರ್ಯಕ್ರಮದಲ್ಲಿ ಅನೇಕ ಪೂಜ್ಯರು, ಗಣ್ಯರು ಪಾಲ್ಗೊಳ್ಳುವರು.

ಜು.12 ರಂದು ಬೆಳಿಗ್ಗೆ 11 ಗಂಟೆಗೆ ಪುರಾಣ ಮಹಾಮಂಗಳ ಹಾಗೂ ಮುತ್ತೈದೆಯರಿಗೆ ಉಡಿತುಂಬುವ ಕಾರ್ಯಕ್ರಮವಿದೆ. ಜಾತ್ರಾ ಮಹೋತ್ಸವ ಕಾರ್ಯಕ್ರಮಕ್ಕೆ ಗ್ರಾಮದ ಮಹಿಳಾ ಸದ್ಭಕ್ತರು ಸ್ವಇಚ್ಛೆಯಿಂದ 2 ಸಾವಿರ ರೂ ದೇಣಿಗೆ ನೀಡಿರುವದು ವಿಶೇಷವಾಗಿದೆ.ಮಹಾಲಕ್ಷ್ಮೀ ದೇವಿಯ ಜಾತ್ರಾ ಮಹೋತ್ಸವ ಮತ್ತು ಪುರಾಣ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಸದ್ಭಕ್ತರು ಆಗಮಿಸಿ ಮಹಾಲಕ್ಷ್ಮೀ ದೇವಿಯ ಕೃಪೆಗೆ ಪಾತ್ರರಾಗುವಂತೆ ತಾಡತೆಗನೂರ ಗ್ರಾಮದ ಸಕಲ ಸದ್ಭಕ್ತ ಮಂಡಳಿಯವರು ತಿಳಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H